ಸಂಪುಟ: 06 ಸಂಚಿಕೆ: 128 ಪುಟಗಳು: 08 ಮಂಗಳವಾರ 21 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಶಸ್ಸು ಮತ್ತು ಸಂತೋಷ ನಮ್ಮ ಕೆಲಸಗಳ ಫಲ ಎಂಬುದು ತಿಳಿಯತೊಡಗಿದರೆ ನಮ್ಮ ಪಯಣ ಸರಿಯಾದ ದಿಕ್ಕಿನಲ್ಲಿದೆ ಎಂದೇ ಅರ್ಥ!



ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿದ ಅಂತ್ಯಕ್ರಿಯೆ

# ಮಣ್ಣಲ್ಲಿ ಮಣ್ಣಾದ ಚೆನ್ನಮ್ಮ!

## ನನ್ನ ಪತ್ನಿ ಅನ್ನಪೂರ್ಣೆ, ಆಕೆಯನ್ನು ರಂಗನಾಥನ ಪಾದಕ್ಕೆ ಕಳಿಸುತ್ತಿದ್ದೇನೆ



ನನ್ನ ಪತ್ನಿ ಅನ್ನಪೂರ್ಣೆ, ಆಕೆಯನ್ನು ರಂಗನಾಥಸ್ವಾಮಿ ಪಾದಕ್ಕೆ ಕಳಿಸುತ್ತಿದ್ದೇನೆ ಎಂದು ಮಡದಿ ಚೆನ್ನಮ್ಮರನ್ನು ನೆನೆದು ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರು ಕಣ್ಣೀರಿಟ್ಟರು.

ಗೌಡರ ಹುಟ್ಟೂರು ಹರದನಹಳ್ಳಿ ಮಾವಿನಕೆರೆಯ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಅಂತ್ಯಕ್ರಿಯೆ ನೆರವೇರಿತು. ಅಂತಿಮ ಕಾರ್ಯವಿಧಾನದ ವೇಳೆ ದೇವೇಗೌಡರು ಪತ್ನಿ ನೆನೆದು ಭಾವುಕರಾದರು. ನಮ್ಮ ಮಕ್ಕಳು, ಅಳಿಯಂದಿರು, ಹೆಣ್ಣು ಮಕ್ಕಳು ಎಲ್ಲರೂ ಸೇರಿ ರಂಗನಾಥನ ಸಾನಿಧ್ಯದಲ್ಲಿ ಸಮಾಧಿ ಮಾಡಲು ತೀರ್ಮಾನಕ್ಕೆ ಬಂದಿದ್ದು.

ಈ ಜಮೀನನ್ನು ಕ್ರಯಕ್ಕೆ ಬರೆಸಿಕೊಂಡು ಪಡವಲಹಿಪ್ಪೆಯಲ್ಲಿ ಮಾಡಬೇಕೆಂಬುದು ನನ್ನ ಇಚ್ಛೆಯಾಗಿತ್ತು. ಆದರೆ ಮಕ್ಕಳು ಇಲ್ಲಿ ಮಾಡಲು ನಿರ್ಧಾರ ಮಾಡಿದ್ದಾರೆ. ನನ್ನ ಹೆಂಡತಿ ಅನ್ನಪೂರ್ಣೆ. ಇದನ್ನು ಉತ್ಪ್ರೇಕ್ಷೆಯಿಂದ ಮಾತನಾಡುತ್ತಿಲ್ಲ.

ಅವರು ಹೇಗೆ ನಡೆದು ಬಂದ್ರು, ನನ್ನ ರಾಜಕೀಯ ಬೆಳವಣಿಗೆಗಾಗಲಿ ಹೇಗೆ ಸಹಕಾರ ನೀಡಿದ್ರು ಅಂತ ಹೇಳುತ್ತಿದ್ದೇನೆ. ಅವರನ್ನು ರಂಗನಾಥನ ಸಾನಿಧ್ಯಕ್ಕೆ ಕಳುಹಿಸಿಕೊಡುತ್ತಿದ್ದೇನೆ. ಇದನ್ನು ವಿಶ್ಲೇಷಣೆ ಮಾಡುವುದು ಕಷ್ಟ ಎಂದು ಭಾವುಕರಾದರು.



ಸಕಲ ಸರ್ಕಾರಿ ಗೌರವಗಳೊಂದಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಅಂತಿಮ ಸಂಸ್ಕಾರ ನೆರವೇರಿಸಲಾಯಿತು. ಕಿರಿಯ ಮಗ ಹೆಚ್.ಡಿ.ರಮೇಶ್ ಅವರು ಅಂತಿಮ ವಿಧಿವಿಧಾನಗಳನ್ನು ಪೂರೈಸಿದರು. ತಾಯಿಯ ಅಂತಿಮ ಸಂಸ್ಕಾರದ ಬಳಿಕ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಭಾವುಕರಾಗಿ ಮಾತನಾಡಿದ್ದು, ತಮ್ಮ ತಾಯಿ ಶಾಶ್ವತವಾಗಿ ತಮ್ಮ ಹೃದಯದಲ್ಲಿ ನೆಲೆಸಿದ್ದಾರೆ.



ತಾಯಿ ಚೆನ್ನಮ್ಮ ಅವರ ನಿಧನದ ನೋವಿನ ನಡುವೆಯೇ, ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅತ್ತೆಯ ನೆನಪುಗಳನ್ನು ಹಂಚಿಕೊಂಡು ಭಾವುಕರಾದರು. ಚೆನ್ನಮ್ಮ ಅವರು ಅತ್ಯಂತ ದೊಡ್ಡ ಶಿವಭಕ್ತೆಯಾಗಿದ್ದರು.

### ಶಾಸ್ತ್ರದ ಪ್ರಕಾರ ಪತ್ನಿ ಚೆನ್ನಮ್ಮನನ್ನು ಕಳಿಸಿಕೊಟ್ಟ ದೇವೇಗೌಡ್ರು

ಗೌಡರ ಹುಟ್ಟೂರು ಹರದನಹಳ್ಳಿ ಮಾವಿನಕೆರೆಯ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿತು. ಪುತ್ರ ಹೆಚ್‌ಡಿ ರಮೇಶ್ ಅವರು ಅಂತಿಮ ವಿಧಿವಿಧಾನ ಪೂರೈಸಿದ್ದು, ಇನ್ನು ದೇವೇಗೌಡ್ರು ಪತ್ನಿಯ ಕೊನೆ ಮುಖ ನೋಡಿ ಮಣ್ಣು ಹಾಕಿ ವಿದಾಯ ಹೇಳಿದರು.

• ಉದಯವಾಹಿನಿ, ಬೆಂಗಳೂರು

ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರ ಪತ್ನಿ ಚೆನ್ನಮ್ಮ ದೇವೇಗೌಡ ಅವರ ಅಂತ್ಯಕ್ರಿಯೆ ಸೋಮವಾರ ಹಾಸನ ಜಿಲ್ಲೆಯಲ್ಲಿ ಒಕ್ಕಲಿಗ ಸಂಪ್ರದಾಯದಂತೆ ನಡೆಯಿತು. ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಗ್ರಾಮದ ರಂಗನಾಥ ಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಸರ್ಕಾರಿ ಗೌರವಗಳೊಂದಿಗೆ ಚೆನ್ನಮ್ಮ ಅಂತ್ಯಕ್ರಿಯೆ ನರವೇರಿತು. ಪಕ್ಷಾತೀತವಾಗಿ ಹಿರಿಯ ನಾಯಕರು ಅಂತಿಮ ನಮನ ಸಲ್ಲಿಸಲು ಮಾವಿನಕೆರೆಯಲ್ಲಿ ಜಮಾಯಿಸಿದ್ದು ಅಂತ್ಯಕ್ರಿಯೆಯಲ್ಲಿ ಭಾಗಿಯಾದರು. ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವರು ಮತ್ತು ಹಿರಿಯ ಕಾಂಗ್ರೆಸ್ ಮತ್ತು ಬಿಜೆಪಿ ನಾಯಕರು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಮತ್ತು ಗೌಡರ ಕುಟುಂಬಕ್ಕೆ ಸಾಂತ್ವಾನ ಹೇಳಿದರು.

ಆದಿಚುಂಚನಗಿರಿ ಮಠದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ನೇತೃತ್ವದಲ್ಲಿ ವಿವಿಧ ಮಠಗಳ ಧಾರ್ಮಿಕ ಮುಖಂಡರು ಮತ್ತು ಪೊಲೀಸ್ ಮಹಾನಿರ್ದೇಶಕ ಎಂ ಎ ಸಲೀಂ ಅವರಂತಹ ಹಿರಿಯ ಸರ್ಕಾರಿ ಅಧಿಕಾರಿಗಳು ಅಪಾರ ಸಂಖ್ಯೆಯಲ್ಲಿ ಸೇರಿದ್ದ ಜನರ ಜೊತೆಗೆ ಅಂತಿಮ ನಮನ ಸಲ್ಲಿಸಿದರು. ಅಂತ್ಯಕ್ರಿಯೆಗೆ ಮೊದಲು, ಸರ್ಕಾರಿ ಗೌರವದ ಭಾಗವಾಗಿ ಗುಂಡು ಹಾರಿಸಿ ಗೌರವ ಸಲ್ಲಿಸಲಾಯಿತು. ಚೆನ್ನಮ್ಮ ಪಾರ್ಥಿವ ಶರೀರದ ಮೇಲೆ ಹೊದಿಸಲಾಗಿದ್ದ ತ್ರಿವರ್ಣ ಧ್ವಜವನ್ನು ಮುಖ್ಯಮಂತ್ರಿ ಶಿವಕುಮಾರ್, ದೇವೇಗೌಡರಿಗೆ ಹಸ್ತಾಂತರಿಸಿದರು. ಚೆನ್ನಮ್ಮ 1954ರಲ್ಲಿ ಗೌಡರನ್ನು ವಿವಾಹವಾಗಿದ್ದರು. ದಂಪತಿಗೆ ನಾಲ್ವರು ಗಂಡು ಮಕ್ಕಳು, ಕುಮಾರಸ್ವಾಮಿ, ರೇವಣ್ಣ, ಎಚ್ ಡಿ ಬಾಲಕೃಷ್ಣ ಮತ್ತು ಎಚ್ ಡಿ ರಮೇಶ್ ಮತ್ತು ಇಬ್ಬರು ಹೆಣ್ಣುಮಕ್ಕಳಿದ್ದಾರೆ. ಪ್ರಮುಖ ರಾಜಕಾರಣಿಗಳ ಪತ್ನಿ ಮತ್ತು ತಾಯಿಯಾದರೂ, ಚೆನ್ನಮ್ಮ ಹೆಚ್ಚಾಗಿ ಸಾರ್ವಜನಿಕ ಜೀವನದಿಂದ ದೂರವಿದ್ದರು.

### ಪುತ್ರ ರೇವಣ್ಣರಿಂದ ತಾಯಿಗೆ ಅಂತಿನ ನಮನ

ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಬೆಟ್ಟದ ತಪ್ಪಲಿನ ಜಮೀನಿನಲ್ಲಿ ಚೆನ್ನಮ್ಮನವರ ಅಂತ್ಯಕ್ರಿಯೆ ನಡೆದಿದ್ದು, ಸಿಎಂ ಡಿಕೆ ಶಿವಕುಮಾರ್ ಆದಿಯಾಗಿ ಸಚಿವರು, ಶಾಸಕರು ಸೇರಿದಂತೆ ಸ್ವಾಮೀಜಿಗಳು ಚೆನ್ನಮ್ಮರಿಗೆ ಪುಷ್ಪ ನಮನ ಸಲ್ಲಿಸಿದರು. ಇನ್ನು ಪುತ್ರ ಹೆಚ್‌ಡಿ ರೇವಣ್ಣ ಅವರು ಸಹ ಪ್ರೀತಿಯ ತಾಯಿಯ ಕೆನ್ನೆಗೆ ಅಂತಿಮ ಮುತ್ತಿಟ್ಟು ಕಣ್ಣೀರಿಟ್ಟರು.

### ಪತಿಯ ಕೈ ಹಿಡಿದೇ ಕಣ್ಣು ಮುಚ್ಚಿದ ಜೀವ!

ಚನ್ನಮ್ಮ ಅವರ ಕಣ್ಣುಗಳು ಮಾತ್ರ 72 ವರ್ಷಗಳ ಕಾಲ ತಮಗೆ ತಾಳಿ ಕಟ್ಟಿ, ಸುಖ-ದುಃಖದಲ್ಲಿ ಜೊತೆಯಾಗಿದ್ದ ಪತಿಯಾದ ದೊಡ್ಡ ಗೌಡರನ್ನೇ ಹುಡುಕುತ್ತಿದ್ದವು. ಕೊನೆಗೆ ಹಾಸಿಗೆಯ ಪಕ್ಕದಲ್ಲೇ ಕಣ್ಣೀರು ಹಾಕುತ್ತಾ ಕುಳಿತಿದ್ದ ದೇವೇಗೌಡರ ಕೈಯನ್ನು ಚನ್ನಮ್ಮ ಗಟ್ಟಿಯಾಗಿ ಹಿಡಿದುಕೊಂಡು, ಆ ಸುದೀರ್ಘ ಪಯಣದ ಹಿತವಾದ ಸ್ಪರ್ಶ ಸಿಗುತ್ತಿದ್ದಂತೆ, ಪತಿಯ ಹಸ್ತದ ಮೇಲೆಯೇ ನೆಮ್ಮದಿಯಿಂದ ಚನ್ನಮ್ಮ ಕಣ್ಣು ಮುಚ್ಚಿದರು.

- ಹಳ್ಳಿಯಿಂದ ದಿಲ್ಲಿಯವರೆಗೆ ಜೊತೆಯಾಗಿದ್ದ ಆದರ್ಶ ಒಡನಾಟ!
- ಪತಿಯ ಕೈ ಹಿಡಿದೇ ಕಣ್ಣು ಮುಚ್ಚಿದ ಜೀವ!
- ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿದ ಚೆನ್ನಮ್ಮ ಅಂತ್ಯಕ್ರಿಯೆ

## ಡಿಕೆಶಿ ಸಚಿವ ಸಂಪುಟ ವಿಸ್ತರಣೆ ಸನ್ನಿಹಿತ ಇಂದು ಸಚಿವರ ಪಟ್ಟಿ ಫೈನಲ್..?



• ಉದಯವಾಹಿನಿ, ಬೆಂಗಳೂರು

ರಾಜ್ಯ ಸಚಿವ ಸಂಪುಟಕ್ಕೆ ಅಂತೂ ಮುಹೂರ್ತ ಕೂಡಿಬಂದಿದೆ. ಎಲ್ಲಾ ಅಂದುಕೊಂಡಂತೆ ಆದ್ರೆ ಮಂಗಳವಾರ ಸಚಿವರ ಪಟ್ಟಿಗೆ ಅಂತಿಮ ಮುದ್ರೆ ಬೀಳಲಿದೆ. ಹೈಕಮಾಂಡ್ ಬುಲಾವ್ ಹಿನ್ನೆಲೆಯಲ್ಲಿ ಮಂಗಳವಾರ ದೆಹಲಿಗೆ ಸಿಎಂ ಡಿಕೆ ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ತೆರಳಲಿದ್ದಾರೆ. ರಾಹುಲ್ ಗಾಂಧಿ ಖರ್ಗೆ ನೇತೃತ್ವದಲ್ಲಿ ಹೈವೋಲ್ಟೇಜ್ ಸಭೆ ನಡೆಯುವ ಸಾಧ್ಯತೆ ಇದ್ದು, ಸಭೆಯಲ್ಲಿ ಸಚಿವರ ಪಟ್ಟಿ ಅಂತಿಮಗೊಳ್ಳಲಿದೆ ಎನ್ನಲಾಗಿದೆ. ಕಳೆದ ಬಾರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅನುಪಸ್ಥಿತಿಯಲ್ಲಿ ಸಭೆ ಅಪೂರ್ಣವಾಗಿತ್ತು.

ಈ ಹಿನ್ನೆಲೆಯಲ್ಲಿ ಇಂದು ಮತ್ತೊಮ್ಮೆ ಸಭೆಗೆ ವೇದಿಕೆ ಸಿದ್ಧವಾಗಿದೆ. ಈಗಾಗಲೇ ಪಟ್ಟಿಸಿದ್ದಪಡಿಸಿರುವ ಡಿಕೆಶಿ, ಸಿದ್ದರಾಮಯ್ಯ ಇಂದು ಹೈಕಮಾಂಡ್ ಮುಂದೆ ಮಂಡನೆ ಮಾಡಲಿದ್ದಾರೆ. ಪಟ್ಟಿಗೆ ಹೈಕಮಾಂಡ್ ಗ್ರೀನ್ ಸಿಗ್ನಲ್ ನೀಡಿದ್ರೆ, ಗುರುವಾರ ಅಥವಾ ಶನಿವಾರದೊಳಗೆ ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆಯಲಿದೆ.

## ಗಣೇಶ ಹಬ್ಬಕ್ಕೂ ಮುನ್ನವೇ ಸುರೇಶ್ ಕುಮಾರ್ ಅಲರ್ಟ್: ಪಿಓಪಿ ಮೂರ್ತಿಗಳ ಬಳಕೆ ತಡೆಗಟ್ಟುವಂತೆ ಕೃಷ್ಣಬೈರೇಗೌಡಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಶೀಘ್ರದಲ್ಲಿ ಗಣೇಶ ಹಬ್ಬವು ಸಮೀಪಿಸುತ್ತಿದೆ. ಹೀಗಾಗಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ಮೂರ್ತಿಗಳ ಹಾವಳಿಯನ್ನು ತಡೆಗಟ್ಟಲು ತುರ್ತು ಕ್ರಮಕ್ಕೆಗೊಳ್ಳುವಂತೆ ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಸಚಿವ ಕೃಷ್ಣಬೈರೇಗೌಡಗೆ ರಾಜಾಜಿನಗರ ಕ್ಷೇತ್ರದ ಬಿಜೆಪಿ ಶಾಸಕ ಸುರೇಶ್ ಕುಮಾರ್ ಪತ್ರ ಬರೆಯುವ ಮೂಲಕ ಮನವಿ ಮಾಡಿದ್ದಾರೆ. 'ಗಣೇಶ ಹಬ್ಬಕ್ಕೆ ದಿನಗಣನೆ ಶುರುವಾಗಿದೆ. ಪ್ರತಿ ವರ್ಷದಂತ ಈ ವರ್ಷವೂ ಮಾರುಕಟ್ಟೆಯಲ್ಲಿ ಪಿಓಪಿ ಗಣೇಶ ಮೂರ್ತಿಗಳ ಹಾವಳಿ ವಿಪರೀತವಾಗಿ ಹೆಚ್ಚಾಗುವ ಸಾಧ್ಯತೆಯಿದೆ. ಇದರಿಂದ ನಮ್ಮ ಜಲಮೂಲಗಳು ಮತ್ತು ಪರಿಸರ ತೀವ್ರವಾಗಿ ಹಾಳಾಗುವುದಲ್ಲದೆ, ಗಣೇಶನ ಮೇಲಿನ ಸಾಂಪ್ರದಾಯಿಕ ಶ್ರದ್ಧೆ ಹಾಗೂ ಪಾವಿತ್ರ್ಯತೆಗೂ ಧಕ್ಕೆಯಾಗುತ್ತದೆ' ಎಂದಿದ್ದಾರೆ. ದೇಶದ ಜನತೆಗೆ ಗಣೇಶನ ಹಬ್ಬಕ್ಕೂ ಸುಮಾರು 75 ದಿನಗಳ ಮುಂಚೆಯೇ ಕರೆ ನೀಡಿದ್ದಾರೆ.

## ಮಾನದಂಡಗಳ ಅನ್ವಯವೇ ಶಾಶ್ವತ ನಿವಾಸ ಪ್ರಮಾಣಪತ್ರ ಅಕ್ರಮ ನಿವಾಸಿಗಳು ಹೊರಕ್ಕೆ: ಪರಮೇಶ್ವರ್



• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ಎಸ್‌ಐಆರ್ ಮಾಡಲು ಪ್ರಾರಂಭಿಸಿದ್ದು 11 ಮಾನದಂಡಗಳ ಪ್ರಕಾರವೇ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ನೀಡಲು ತೀರ್ಮಾನಿಸಲಾಗಿದೆ ಎಂದು ಉಪಮುಖ್ಯಮಂತ್ರಿ ,ಕಂದಾಯ ಸಚಿವ ಪರಮೇಶ್ವರ್ ಅವರು ತಿಳಿಸಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ರಾಜ್ಯದಲ್ಲಿ ಮನೆ ಮನೆಗೆ ತೆರಳಿ ಉಚಿತ ಜಾತಿ ಪ್ರಮಾಣ ಪತ್ರ ವಿತರಣೆ'' ಹಾಗೂ ''ಶಾಶ್ವತ ನಿವಾಸ ಪ್ರಮಾಣಪತ್ರ ವಿತರಿಸುವ ಸೇವೆಯ ಆರಂಭಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚಾಲನೆ ನೀಡಿ ಮಾತನಾಡಿದರು. ಈ ವೇಳೆ, ಶಾಶ್ವತ ನಿವಾಸಿಗಳ ಪ್ರಮಾಣ ಪತ್ರವನ್ನು ಮನೆಮನೆಗೆ ತಲುಪಿಸುವ ಮೂಲಕ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ನೇತೃತ್ವದ ನಮ್ಮ ಸರ್ಕಾರವು ಜನರ ಸೇವೆ ಮಾಡಲು ಮತ್ತೊಂದು ಹೆಜ್ಜೆಯನ್ನಟ್ಟಿದೆ ಎಂದು ಹೇಳಿದರು. ಪಿಆರ್‌ಸಿಯನ್ನು ಯಾವ ಆಧಾರದ ಮೇಲೆ ನೀಡಬೇಕು ಎಂಬ ಕುರಿತು ಕೆಲವು ನಿಯಮಗಳನ್ನು ರೂಪಿಸಲಾಗಿದೆ. ಉದ್ಯೋಗ, ವಿವಾಹ, ರಾಜ್ಯದಲ್ಲಿ ಸತತವಾಗಿ ಹತ್ತು ವರ್ಷಗಳ ಕಾಲ ವಾಸ ಮಾಡಿರಬೇಕು. ಕರ್ನಾಟಕದಲ್ಲಿ ಜನಿಸಿರುವ ಆಧಾರದ ಮೇಲೆ ಪಿಆರ್‌ಸಿ ನೀಡಲು ತೀರ್ಮಾನಿಸಿದ್ದೇವೆ. ಸರ್ಟಿಫಿಕೆಟ್‌ಗಳನ್ನು ಮನೆಮನೆಗೆ ತಲುಪಿಸುತ್ತೇವೆ.

## ಮೇಕೆದಾಟು ಯೋಜನೆಗೆ ತಮಿಳುನಾಡು ವಿರೋಧಿಸುತ್ತಿರುವುದು ಸರಿಯಲ್ಲ - ಈಶ್ವರ್ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೆ ಲಾಭ. ಹೀಗಾಗಿ ಅವರು ಯೋಜನೆ ವಿರೋಧ ಮಾಡಬಾರದು ಅಂತ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಮಾತನಾಡಿದ ಅವರು, ಮೇಕೆದಾಟು ಕುಡಿಯುವ ನೀರು ಮತ್ತು ವಿದ್ಯುತ್ ಉತ್ಪಾದನೆಯ ಯೋಜನೆಯಾಗಿದ್ದು, ಇದಕ್ಕೆ ತಮಿಳುನಾಡು ಆಕ್ಷೇಪ, ವಿರೋಧ ವ್ಯಕ್ತಪಡಿಸುವುದು ಸರಿಯಲ್ಲ. ಕುಡಿಯುವ ನೀರು ಪ್ರತಿಯೊಬ್ಬರ ಮೂಲಭೂತ ಹಕ್ಕು, ರಾಜಕೀಯ ಕಾರಣಕ್ಕಾಗಿ ವಿರೋಧ ಮಾಡುವುದು ಸರ್ವಥಾ ಸಮರ್ಥನೀಯವಲ್ಲ ಎಂದಿದ್ದಾರೆ.

ಬೆಂಗಳೂರಿನಲ್ಲಿ 1 ಕೋಟಿಗೂ ಹೆಚ್ಚು ಜನರಿದ್ದು, ಕುಡಿಯುವ ನೀರು ಪೂರೈಸಲು ಮತ್ತು ಜಲ ವಿದ್ಯುತ್ ಉತ್ಪಾದಿಸಲು ರಾಜ್ಯ ಸರ್ಕಾರ ಈ ಯೋಜನೆ ರೂಪಿಸಿದೆ. ಈ ಯೋಜನೆಯಿಂದ ತಮಿಳುನಾಡಿಗೂ ಲಾಭವಾಗುತ್ತದೆ. ಹೀಗಾಗಿ ನೆರೆ ರಾಜ್ಯ ಬೆಂಬಲ ನೀಡಬೇಕೇ ಹೊರತು ವಿರೋಧ ಮಾಡಬಾರದು ಎಂದು ಹೇಳಿದ್ದಾರೆ.

## ಮನೆ ಬಾಗಿಲಿಗೆ ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆ ಅತ್ಯಂತ ಆತಂಕಕಾರಿ ಬೆಳವಣಿಗೆ: ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಇಂದು 'ಮನೆ ಬಾಗಿಲಿಗೆ ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಣೆಗೆ ಚಾಲನೆ ನೀಡಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ.

ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, ಸರ್ಕಾರ ಇದನ್ನು ಆಡಳಿತ ಸುಧಾರಣೆ ಎಂದು ಬಿಂಬಿಸಲು ಪ್ರಯತ್ನಿಸುತ್ತಿದೆಯಾದರೂ, ಮೂಲತಃ ಸಂವಿಧಾನ ಬಾಹಿರ ಮತ್ತು ಕಾನೂನುಬಾಹಿರ ಕ್ರಮ ಎಂಬುದನ್ನು ರಾಜ್ಯದ ಜನರು ಅರಿತಿಕೊಳ್ಳಬೇಕು. ಇಷ್ಟಕ್ಕೂ 'ಶಾಶ್ವತ ನಿವಾಸಿ ಪ್ರಮಾಣಪತ್ರ ನೀಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಕೊಟ್ಟಿದ್ದು ಯಾರು? ಎಂದು ಪ್ರಶ್ನಿಸಿದ್ದಾರೆ. ಭಾರತದ ಸಂವಿಧಾನದ ಪ್ರಕಾರ ಪೌರತ್ವ, ವಿದೇಶಿಯರ ಗುರುತಿಸುವಿಕೆ ಹಾಗೂ ವಲಸೆ ಸಂಬಂಧಿತ ವಿಷಯಗಳು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಸೇರಿವೆ. ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ತನ್ನ ಅಧಿಕಾರದ ಮಿತಿಯನ್ನು ಮೀರಿ ನಡೆದುಕೊಳ್ಳುತ್ತಿರುವುದು ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧ ಎಂದಿದ್ದಾರೆ. ದೇಶಾದ್ಯಂತ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿರುವ ಈ ಸಂದರ್ಭದಲ್ಲಿ ಇಂತಹ ಪ್ರಮಾಣಪತ್ರಗಳನ್ನು ಮನೆ ಮನೆಗೆ ವಿತರಿಸುವ ಆತುರವೇಕೆ? ಇದರ ಹಿಂದೆ ಇರುವ ಉದ್ದೇಶವೇನು? ಅಕ್ರಮ ವಲಸಿಗರು ಅಥವಾ ನಕಲಿ ದಾಖಲೆಗಳನ್ನು ಸೃಷ್ಟಿಸಿ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳಲು ಈ ಸರ್ಕಾರ ಬಾಗಿಲು ತೆರೆಯುತ್ತಿದೆಯೇ ಎಂಬ ಅನುಮಾನಗಳು ಸಹಜವಾಗಿ ಮೂಡುತ್ತಿವೆ. ರಾಷ್ಟ್ರೀಯ ಭದ್ರತೆ ಮತ್ತು ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆಗೆ ಧಕ್ಕೆ ತರುವ ಯಾವುದೇ ಕ್ರಮವನ್ನು ಬಿಜೆಪಿ ಸಹಿಸುವುದಿಲ್ಲ ಎಂದು ತಿಳಿಸಿದ್ದಾರೆ. ಕಂದಾಯ ಇಲಾಖೆಯ ಮೂಲಕ ಈ ಪ್ರಮಾಣಪತ್ರ ವಿತರಣೆಗೆ ಮುಂದಾಗಿರುವುದು ಭ್ರಷ್ಟಾಚಾರ, ನಕಲಿ




ದಾಖಲೆಗಳ ಸೃಷ್ಟಿ ಹಾಗೂ ಅಧಿಕಾರ ದುರುಪಯೋಗಕ್ಕೆ ಅವಕಾಶ ಕಲ್ಪಿಸುವ ಅಪಾಯಕಾರಿ ನಿರ್ಧಾರವಾಗಿದೆ. ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ರಾಜ್ಯದ ಭವಿಷ್ಯವನ್ನು ಪಣಕ್ಕಿಡುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ತಕ್ಷಣ ನಿಲ್ಲಿಸಬೇಕು. ಸ್ಥಳೀಯ ಕನ್ನಡಿಗರ ಶಿಕ್ಷಣ, ಉದ್ಯೋಗ ಮತ್ತು ಅವಕಾಶಗಳ ಮೇಲೆ ಪರಿಣಾಮ ಬೀರುವ ಯಾವುದೇ ಕ್ರಮವನ್ನು ನಾವು ಒಪ್ಪುವುದಿಲ್ಲ.

ಆಡಳಿತದ ಹೆಸರಿನಲ್ಲಿ ಸಂವಿಧಾನವನ್ನು ಉಲ್ಲಂಘಿಸಲು ಯಾರಿಗೂ ಅಧಿಕಾರವಿಲ್ಲ ಎಂದಿದ್ದಾರೆ. ಈ ಸಂವಿಧಾನಬಾಹಿರ ಶಾಶ್ವತ ನಿವಾಸಿ ಪ್ರಮಾಣಪತ್ರ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಿ, ಸರ್ಕಾರ ಹೊರಡಿಸಿರುವ ಪ್ರಸ್ತಾವನೆಯನ್ನು ಹಿಂಪಡೆಯಬೇಕು ಎಂದು ನಾನು ಮತ್ತೊಮ್ಮೆ ರಾಜ್ಯ ಸರ್ಕಾರವನ್ನು ಆಗ್ರಹಿಸುತ್ತೇನೆ. ಸಂವಿಧಾನದ ಆಶಯಗಳು, ಕನ್ನಡಿಗರ ಹಕ್ಕುಗಳು ಮತ್ತು ದೇಶದ ಆಂತರಿಕ ಭದ್ರತೆಯ ವಿಚಾರದಲ್ಲಿ ಬಿಜೆಪಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ.

ಈ ಸಂವಿಧಾನ ಬಾಹಿರ ನಡೆ ವಿರುದ್ಧ ನಾವು ಕಾನೂನಾತ್ಮಕವಾಗಿ ಮತ್ತು ರಾಜಕೀಯವಾಗಿ ಹೋರಾಡುತ್ತೇವೆ. ರಾಷ್ಟ್ರೀಯ ಭದ್ರತೆಗೆ ಮಾರಕವಾಗಿರುವ ಇದರ ವಿರುದ್ಧ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಜನಾಂದೋಲನ ಕಟ್ಟುತ್ತೇವೆ ಎಂದು ಅಶೋಕ್ ತಿಳಿಸಿದ್ದಾರೆ.

## ಕಾಕ್ರೋಚ್‌ಗಳ ವಿರುದ್ಧ ಅಶ್ರುವಾಯು ಪ್ರಯೋಗ ಅಭಿಜಿತ್ ದೀಪ್ಕೆ ಪೊಲೀಸರ ವಶಕ್ಕೆ

• ಉದಯವಾಹಿನಿ, ನವದೆಹಲಿ

ಕಾಕ್ರೋಚ್ ಜನತಾ ಪಾರ್ಟಿ ನಡೆಸುತ್ತಿರುವ ಸಂಸತ್ ಚಲೋ ಪ್ರತಿಭಟನಾರ‍್ಯಾಲಿ ವೇಳೆ ಭಾರೀ ಉದ್ವಿಗ್ನತೆ ಉಂಟಾಗಿದ್ದು, ಪಕ್ಷದ ಸಂಸ್ಥಾಪಕ ಅಭಿಜಿತ್ ದೀಪ್ಕೆಯವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಸಿಜೆಪಿ ಆರೋಪಿಸಿದೆ. ಸಂಸತ್ ಮುತ್ತಿಗೆಗೆ ಯತ್ನಿಸಿದ ಕಾಕ್ರೋಚ್ ಜನತಾ ಪಾರ್ಟಿ ಸದಸ್ಯರ ಮೇಲೆ ಪೊಲೀಸರು ಲಾಠಿಚಾರ್ಜ್‌ಮಾಡಿದ್ದಾರೆ.

ಅಲ್ಲದೇ ಪ್ರತಿಭಟನಾಕಾರರನ್ನು ಚದುರಿಸಲು ಅಶ್ರುವಾಯು ಸಿಡಿಸಿದ್ದಾರೆ. ಇದರಿಂದ ದೆಹಲಿಯಲ್ಲಿ ಭಾರೀ ಉದ್ವಿಗ್ನತೆ ಉಂಟಾಗಿದೆ. ಲಾಠಿಚಾರ್ಜ್ ಬೆನ್ನಲ್ಲೇ ದೆಹಲಿಯ ಕೆಲವು ಭಾಗಗಳಲ್ಲಿ ಮೊಬೈಲ್ ಇಂಟರ್ನೆಟ್ ಸ್ಥಗಿತಗೊಂಡಿದೆ. ಸಂಸತ್ತಿನ ಮಳೆಗಾಲದ ಅಧಿವೇಶನದ ಸಮಯದಲ್ಲಿ ಭಾರೀ ಭದ್ರತೆಯ ನಡುವೆಯೂ ಪ್ರತಿಭಟನಾಕಾರರು ಸಂಸತ್ ಚಲೋರ‍್ಯಾಲಿ ನಡೆಸಿದ್ದರು. ಬ್ಯಾರಿಕೇಡ್‌ಗಳನ್ನು ದಾಟಿ ಸಂಸತ್ತಿನ ಕಡೆಗೆ ನುಗ್ಗಲು ಪ್ರತಿಭಟನಾಕಾರರು ಯತ್ನಿಸಿದ್ದರು. ಈ ವೇಳೆ ಪೊಲೀಸರು ಹಲವಾರು ಪ್ರತಿಭಟನಾಕಾರರನ್ನು ಬಂಧಿಸಿದ್ದಾರೆ. ಸಂಸತ್ತಿನ ಅಧಿವೇಶನ ಆರಂಭವಾಗುತ್ತಿರುವುದರಿಂದ ದೆಹಲಿ ನಗರದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸೆಕ್ಷನ್ 163 (ಹಳೆಯ 144ನೇ ವಿಧಿ) ಅಡಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿತ್ತು.

ಈ ಮೆರವಣಿಗೆಗೆ ಯಾವುದೇ ಅಧಿಕೃತ ಅನುಮತಿ ನೀಡಿರಲಿಲ್ಲ ಮತ್ತು ಕಾನೂನು ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ಮುಂಚಿತವಾಗಿಯೇ ಎಚ್ಚರಿಸಿದ್ದರು. 2026ರ ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ವಿರೋಧಿಸಿ ದೆಹಲಿಯ



ಜಂತರ್ ಮಂತರ್‌ನಲ್ಲಿ ಸಾವಿರಾರು ಪ್ರತಿಭಟನಾಕಾರರು, ವಿರೋಧ ಪಕ್ಷದ ನಾಯಕರು ಹಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರತಿಭಟನಾಕಾರರು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಅಭಿಜೀತ್ ದೀಪ್ಕೆ ಅವರನ್ನು ವಶಕ್ಕೆ ಪಡೆದಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿರುವ ದೆಹಲಿ ಪೊಲೀಸರು ಮತ್ತು ಸಿಜೆಪಿ ಸಂಘಟನೆಯ ವಕ್ತಾರರು, ದೀಪ್ಕೆಯನ್ನು ವಶಕ್ಕೆ ಪಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ಇದೇ ಸಂದರ್ಭದಲ್ಲಿ ವಾಗ್ದಾಳಿಯನ್ನು ನಡೆಸಿವೆ. ಶಾಂತಿಯುವ ಪ್ರತಿಭಟನೆಯ ವೇಳೆ ಲಾಠಿ ಚಾರ್ಜ್ ಮಾಡಿದ್ದೇ ಗಲಭೆಗೆ ಕಾರಣ ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ವಾಗ್ದಾಳಿ ನಡೆಸಿದ್ದಾರೆ. ಪ್ರತಿಭಟನಾಕಾರರ ಜೊತೆಗೆ ಸರ್ಕಾರ ಚರ್ಚೆಗೆ ಮುಂದಾಗಬೇಕಿತ್ತು ಎಂದು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ.

# ಸಂಸತ್ ಮುಂಗಾರು ಅಧಿವೇಶನ: ನೀಟ್ ಕುರಿತಂತೆ ಪ್ರತಿಪಕ್ಷಗಳ ಗದ್ದಲ

## ಉಭಯ ಸದನಗಳು ಇಂದು ಮುಂದೂಡಿಕೆ!

## ವಂದೇ ಮಾತರಂ' ಅವಮಾನಿಸಿದರೆ ಶಿಕ್ಷೆ: ಮಸೂದೆ ಮಂಡಿಸಲು ಕೇಂದ್ರ ಸರ್ಕಾರ ಸಜ್ಜು

• ಉದಯವಾಹಿನಿ, ದೆಹಲಿ

ಸೋಮವಾರ ಸಂಸತ್ತಿನ ಮುಂಗಾರು ಅಧಿವೇಶನ ಇಂದಿನಿಂದ ಆರಂಭವಾಗಿದ್ದು ಸದನದಲ್ಲಿ ನೀಟ್-ಯುಜಿ ಪರೀಕ್ಷಾ ಪತ್ರಿಕೆ ಸೋರಿಕೆ, ಅಯೋಧ್ಯೆ ರಾಮ ಮಂದಿರದಲ್ಲಿ ದೇಣಿಗೆ ಕಳ್ಳತನ ಮತ್ತು ಎಥೆನಾಲ್ ಮಿಶ್ರಣದ ವಿವಾದಗಳ ಕುರಿತಂತೆ ಪ್ರತಿಪಕ್ಷಗಳು ಗದ್ದಲ ಎಬ್ಬಿಸಿದ್ದು ಉಭಯ ಸದನಗಳನ್ನು ನಾಳೆಗೆ ಮುಂದೂಡಲಾಗಿದೆ.

ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಶಿವಸೇನೆ (ಯುಬಿಟಿ) ಪಕ್ಷಾಂತರಗಳ ನಂತರ ಎರಡೂ ಸದನಗಳು ಬದಲಾದ ರಾಜಕೀಯ ಅಂಕಗಣಿತಕ್ಕೆ ಸಾಕ್ಷಿಯಾಗಿತ್ತು. ಇಂದಿನಿಂದ ಆರಂಭವಾಗಿರುವ ಸಂಸತ್ತಿನ ಮುಂಗಾರು ಅಧಿವೇಶನ ಆಗಸ್ಟ್ 13 ರವರೆಗೆ ನಡೆಯಲಿದ್ದು ಅಧಿವೇಶನದಲ್ಲಿ ಮೋದಿ ಸರ್ಕಾರ ಹಲವಾರು ಪ್ರಮುಖ ಮಸೂದೆಗಳನ್ನು ಮಂಡಿಸಲಿದೆ. ಅತಿದೊಡ್ಡ ಸಸ್ಪೆನ್ಸ್ ಎಂದರೆ ಡಿಲಿಮಿಟೇಶನ್ ಮತ್ತು ಮಹಿಳಾ ಮೀಸಲಾತಿ ಮಸೂದೆಗಳು. ಬದಲಾದ ರಾಜಕೀಯ ಚಲನಶೀಲತೆ ಮತ್ತು ಹೊಸ ಲೋಕಸಭಾ ಸಂಖ್ಯಾಬಲದ ಆಟವು ಸರ್ಕಾರದ ಭರವಸೆಯನ್ನು ಹೆಚ್ಚಿಸಿದೆ. ಏತನ್ಮಧ್ಯೆ, ಬಂಡಾಯ ಟಿಎಂಸಿ ಸಂಸದರನ್ನು ಸರ್ವಪಕ್ಷ



ಸಭೆಗೆ ಕರೆದ ನಂತರ ವಿರೋಧ ಪಕ್ಷದ ಸಭಾತ್ಯಾಗವು ಅಧಿವೇಶನ ಪ್ರಾರಂಭವಾಗುವ ಮೊದಲೇ ರಾಜಕೀಯ ತಾಪಮಾನವನ್ನು ಹೆಚ್ಚಿಸಿತ್ತು. ಸಂಸತ್ತಿನ ಮಳೆಗಾಲದ ಅಧಿವೇಶನವು ಗಣನೀಯ ಗದ್ದಲದೊಂದಿಗೆ ಪ್ರಾರಂಭವಾಗಿದೆ. ನೀಟ್ ಪತ್ರಿಕೆ ಸೋರಿಕೆ ಮತ್ತು ರಾಮ ಮಂದಿರ ವಿವಾದದಂತಹ ವಿಷಯಗಳ ಬಗ್ಗೆ ವಿರೋಧ ಪಕ್ಷಗಳು ಭಾರಿ ಗದ್ದಲವನ್ನು ಸೃಷ್ಟಿಸಿವೆ. ಇದು ಲೋಕಸಭೆ ಮತ್ತು ರಾಜ್ಯಸಭೆ ಎರಡರಲ್ಲೂ ಪದೇ ಪದೇ ಮುಂದೂಡಿಕೆಗೆ ಕಾರಣವಾಯಿತು.

### ರಾಹುಲ್ ಗಾಂಧಿಗೆ ಮೋದಿ ಟಾಂಗ್

ಅಧಿವೇಶನ ಆರಂಭಕ್ಕೂ ಮುನ್ನ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಮುಂಗಾರು ಮತ್ತು ಸಂಸತ್ತಿನ ಮುಂಗಾರು ಅಧಿವೇಶನ ಎರಡೂ ಉತ್ಪಾದಕವಾಗಿರಲಿ ಎಂದು ಆಶಿಸಿದರು. ದೇಶದ ಪ್ರಗತಿಗಾಗಿ ಸಂಸತ್ತಿನಲ್ಲಿ ಸತ್ಯ ಮತ್ತು ಸತ್ಸಂಗತಿಯ ಆಧಾರದ ಮೇಲೆ ರಚನಾತ್ಮಕ ಚರ್ಚೆಗಳು ನಡೆಯಬೇಕು ಎಂದು ಅವರು ಕರೆ ನೀಡಿದರು. ಮಧ್ಯಪ್ರಾಚ್ಯ ಯುದ್ಧದಿಂದಾಗಿ ಇಂಧನ ಆಮದು ಮಾಡಿಕೊಳ್ಳುವ ಭಾರತದಂತಹ ದೇಶಗಳಿಗೆ ಆತಂಕವಿದ್ದರೂ, ದೇಶವು ಶೇಕಡಾ 7.7 ರಷ್ಟು ಆರ್ಥಿಕ ಪ್ರಗತಿ ಸಾಧಿಸಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ಆಗಸ್ಟ್ 13 ರವರೆಗೆ ನಡೆಯುವ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಒಟ್ಟು 19 ಅಧಿವೇಶನಗಳು ನಡೆಯಲಿವೆ. ಈ ಅವಧಿಯಲ್ಲಿ ಏಳು ಮಸೂದೆಗಳನ್ನು ಪರಿಚಯಿಸಲಾಗುವುದು. ವರದಿಗಳ ಪ್ರಕಾರ, ವಂದೇ ಮಾತರಂ ಮಸೂದೆಯನ್ನು ಸೋಮವಾರ ಲೋಕಸಭೆಯಲ್ಲಿ ಮಂಡಿಸಲಾಗುವುದು. ವೈದ್ಯಕೀಯ ಕಾಲೇಜುಗಳ ಪ್ರವೇಶ ಪರೀಕ್ಷೆಯಾದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳನ್ನು ಖಂಡಿಸಿ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ' ಕಾಕ್ರೋಚ್ ಜನತಾ ಪಾರ್ಟಿ ' ಸಂಸತ್ತಿಗೆ 'ಚಲೋ ಸಂಸದ್' ಮೆರವಣಿಗೆಯನ್ನು ಹಮ್ಮಿಕೊಂಡಿತ್ತು. ಆದರೆ ದೆಹಲಿ ಪೊಲೀಸರು ಇದಕ್ಕೆ ಅನುಮತಿ ನಿರಾಕರಿಸಿದ್ದು, ನವದೆಹಲಿ ಜಿಲ್ಲೆಯಾದ್ಯಂತ ಸೆಕ್ಷನ್ 163(ಹಳೆಯ ಸೆಕ್ಷನ್ 144) ಅಡಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ.

**ಈ ದಿನದ ದರ** | ಪೆಟ್ರೋಲ್: 111.68₹/L | ಡೀಸೆಲ್ : 98.80₹/L | ಬಂಗಾರ: ₹ 14,346/Gram 24ct ₹13,150/Gram 22ct | ಬೆಳ್ಳಿ: ₹235.00/Gram

# ಬರ ಪರಿಸ್ಥಿತಿಯನ್ನು ತಂಡವಾಗಿ ನಿರ್ವಹಿಸೋಣ: ಜಿಲ್ಲಾಧಿಕಾರಿ

## ಜಲಾಶಯ ಹಾಗೂ ಪ್ರಮುಖ ನೀರಿನ ಮೂಲಗಳ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕೆ ಮಾತ್ರ ಕಾಯ್ದಿರಿಸಬೇಕು

• **ಉದಯವಾಹಿನಿ, ಶಿವಮೊಗ್ಗ:**

ರಾಜ್ಯದಲ್ಲಿ ಮುಂಗಾರು ಮಳೆಯ ಕೊರತೆಯಿಂದಾಗಿ ಉದ್ಭವಿಸಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ತಂಡವಾಗಿ ಕೆಲಸ ಮಾಡೋಣ ಎಂದು ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕರೆ ನೀಡಿದ್ದಾರೆ.

**1 : ದಿನನಿತ್ಯದ ವರದಿ ಸಲ್ಲಿಕೆ ಕಡ್ಡಾಯ**
**2 : ಕುಡಿಯುವ ನೀರಿಗೆ ಮೊದಲ ಆದ್ಯತೆ**
**3 : ಅಂತರ್ಜಲ ವೃದ್ಧಿಗೆ ಇಂಗು ಗುಂಡಿ**

ಜೂನ್ ತಿಂಗಳಲ್ಲಿ 27 ಗ್ರಾಮ ಪಂಚಾಯತ್ ವ್ಯಾಪ್ತಿಯ 37 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಸಲಾಗಿದೆ. ಶಿವಮೊಗ್ಗ, ಭದ್ರಾವತಿ, ಸೊರಬ, ಹೊಸನಗರ ಮತ್ತು ಶಿಕಾರಿಪುರ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಿ ಕ್ರಮ ವಹಿಸಲಾಗಿದೆ.

ಜಿಲ್ಲೆಯ ಜಲಾಶಯದ ನೀರನ್ನು ಕೇವಲ ಕುಡಿಯುವ ನೀರಿಗೆ ಬಳಸುವಂತೆ ಹಾಗೂ ರೈತರಿಗೆ ಪರ್ಯಾಯ ಬೆಳೆ ಬೆಳೆಯಲು ತಿಳಿಸಲಾಗಿದೆ ಎಂದು ಡಿಸಿ ಮಾಹಿತಿ ನೀಡಿದರು.ಕೃಷಿ, ತೋಟಗಾರಿಕೆ, ಪಶುಪಾಲನೆ ಹಾಗೂ ಕಂದಾಯ ಇಲಾಖೆಯ ಜಿಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಪ್ರತಿದಿನದ ಬರ ಪರಿಸ್ಥಿತಿ ಮತ್ತು ಕೈಗೊಂಡ ಕ್ರಮಗಳ ವರದಿಯನ್ನು ಕಡ್ಡಾಯವಾಗಿ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಪ್ರತಿ ವಾರ ತಾಲ್ಲೂಕುಗಳಲ್ಲಿ ಟಾಸ್ಕ್ ಫೋರ್ಸ್ ಸಭೆ ನಡೆಸಿ ಸಭಾ ತೀರ್ಮಾನದಂತೆ ಕ್ರಮ ವಹಿಸಬೇಕು. ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಾರದು. ಜಲಾಶಯ ಹಾಗೂ ಪ್ರಮುಖ ನೀರಿನ ಮೂಲಗಳ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕೆ ಮಾತ್ರ ಕಾಯ್ದಿರಿಸಬೇಕು.

ವಾರಕ್ಕೊಮ್ಮೆ ಜಲಾಶಯಗಳ ನೀರಿನ ಮಟ್ಟದ ವರದಿಯನ್ನು ಸಲ್ಲಿಸಬೇಕು. ಶೀಘ್ರದಲ್ಲೇ ಬರ ಪರಿಸ್ಥಿತಿ ಅವಲೋಕನಕ್ಕಾಗಿ ಕೇಂದ್ರ ಅಧ್ಯಯನ ತಂಡ ಭೇಟಿ ನೀಡಲಿದ್ದು, ಜಿಲ್ಲೆಯ ಬೆಳೆ ಹಾನಿ ಹಾಗೂ ಬರದ ತೀವ್ರತೆಯ ನಿಖರವಾದ ಅಂಕಿ-ಅಂಶಗಳ ಮಾಹಿತಿಯೊಂದಿಗೆ ಅಧಿಕಾರಿಗಳು ಸನ್ನದ್ಧರಾಗಿ, ಸಮರ್ಪಕ ಮಾಹಿತಿ ನೀಡಬೇಕು. ಬೆಳೆ ವಿಮೆ ಬಗ್ಗೆ ಜಾಗೃತಿ ಮೂಡಿಸಬೇಕು. ಭೂ ಗ್ಯಾರಂಟಿ ಯೋಜನೆ ಸಮರ್ಪಕವಾಗಿ ಜಾರಿಗೊಳಿಸಲು ಮುಖ್ಯಮಂತ್ರಿಗಳು ಸೂಚಿಸಿದ್ದು, ಯೋಜನೆಯಡಿ ಭೂಮಿ ಹಂಚಿಕೆ, ಸೌಲಭ್ಯ ವಿತರಣೆ ನಿಗದಿತ ಸಮಯದೊಳಗೆ ಸಾರ್ವಜನಿಕರಿಗೆ ನೀಡಬೇಕು. ಕಂದಾಯ, ಗ್ರಾಮೀಣಾಭಿವೃದ್ಧಿ ಸೇರಿದಂತೆ ವಿವಿಧ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ಕೆಲಸ ಮಾಡಬೇಕೆಂದು ಸೂಚಿಸಿದರು. ಎಸ್‌ಐಆರ್ ಪ್ರಕ್ರಿಯೆ ನಿಗದಿತ ಪ್ರಗತಿ ಸಾಧಿಸಲು ಮುಖ್ಯಮಂತ್ರಿಗಳು ಸೂಚಿಸಿದ್ದು ಜಿಲ್ಲೆಯ ಎಲ್ಲ ಬಿಎಲ್‌ಒಗಳು, ಸಂಬಂಧಿಸಿದ ಅಧಿಕಾರಿಗಳು ಸಮನ್ವಯದೊಂದಿಗೆ ಕೆಲಸ ಮಾಡಿ 100% ಪ್ರಗತಿ ಸಾಧಿಸಬೇಕು. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಹಾಗೂ ಗೃಹಜ್ಯೋತಿ ಯೋಜನೆಗಳ ಫಲಾನುಭವಿಗಳ ಸಂಪೂರ್ಣ ಅಂಕಿ-ಅಂಶಗಳು ಪ್ರತಿಯೊಬ್ಬ ತಾಲೂಕು ಮಟ್ಟದ ಅಧಿಕಾರಿಯ ಬಳಿ ಇರಬೇಕು. ಯೋಜನೆಗಳ ಬಗ್ಗೆವ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು.



ಉದಯವಾಹಿನಿ ಚಿತ್ರ

**ಬರಗಾಲದ ಹಿನ್ನೆಲೆಯಲ್ಲಿ ಜನರು ಉದ್ಯೋಗ ಹುಡುಕಿಕೊಂಡು ಬೇರೆಡೆ ಗುಳೆ ಹೋಗುವುದನ್ನು ತಡೆಗಟ್ಟಲು ಹಾಗೂ ಬರಗಾಲವನ್ನು ಸಮರ್ಥವಾಗಿ ಎದುರಿಸಲು ಅನುಕೂಲವಾಗುವಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ತಕ್ಷಣವೇ 'ವಿಬಿ-ಜಿ ರಾಮ್ ಜಿ' ಯೋಜನೆಯಡಿ ಕೆಲಸ ನೀಡಬೇಕು. ಕಾಮಗಾರಿಗಳನ್ನು ಆರಂಭಿಸಿ ಕಾರ್ಮಿಕರಿಗೆ ಉದ್ಯೋಗ ಒದಗಿಸಿ ವರದಿ ನೀಡುವಂತೆ ತಿಳಿಸಿದರು.-ಜಿಲ್ಲಾಧಿಕಾರಿ**

**ಈ ಯೋಜನೆಯಡಿ ದನದ ಕೊಟ್ಟಿಗೆಯಂತಹ ವೈಯಕ್ತಿಕ ಫಲಾನುಭವಿಗಳನ್ನು ಗುರುತಿಸಿ, ಕಾಮಗಾರಿ ನೀಡಬೇಕು. ಬರಗಾಲದ ಹಿನ್ನೆಲೆ ಈ ಯೋಜನೆಯ ಗರಿಷ್ಟ ಬಳಕೆ ಆಗಬೇಕು. ಯೋಜನೆಯನ್ನು ಬಹಳ ಚೆನ್ನಾಗಿ ಅನುಷ್ಟಾನಗೊಳಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದ್ದಾರೆ. ಕೃಷಿ, ತೋಟಗಾರಿಕೆ ಇಲಾಖೆಯ ಸಹಯೋಗದಲ್ಲಿ ಅಗತ್ಯವಿರುವೆಡೆ ಕೃಷಿ ಹೊಂಡ ನಿರ್ಮಾಣ ಮಾಡಬೇಕು ಎಂದು ತಿಳಿಸಿದರು.-ಜಿಲ್ಲಾಧಿಕಾರಿ**

### ಮುಂಜಾಗ್ರತಾ ಕ್ರಮ

**ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಕೊರತೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಒಂದು ವರ್ಷಕ್ಕಾಗುವಷ್ಟು ಮೇವು ಲಭ್ಯವಿದ್ದರೂ ಜಾನುವಾರು ಕುಡಿಯುವ ನೀರು, ಮೇವಿನ ಬಗ್ಗೆ ಅಗತ್ಯವಿರುವ ಕಡೆಗಳಲ್ಲಿ ತಕ್ಷಣವೇ ಕ್ರಮ ಕೈಗೊಳ್ಳಬೇಕೆಂದು ಪಶುಪಾಲನಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.**

# ಆಪರೇಷನ್ ರೈಸ್, ಬೇಡ ಬ್ರೋ ಅಭಿಯಾನಕ್ಕೆ ಚಾಲನೆ

• **ಉದಯವಾಹಿನಿ ಕಲಬುರಗಿ,**

ಕಲಬುರಗಿ ನಗರ ಮತ್ತು ಕಲಬುರಗಿ ಜಿಲ್ಲಾ ಪೊಲೀಸ ವತಿಯಿಂದ ''ಬೇಡ ಬ್ರೋ ಮತ್ತು ರೈಸ್ '' ಅಭಿಯಾನಕ್ಕೆ ಇಂದು ಚಾಲನೆ ನೀಡಲಾಯಿತು. ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ., ಡಿಸಿಪಿಗಳಾದ ಶಾಲೂ, ಪ್ರವೀಣ್ ನಾಯಕ್, ಎಸ್.ಪಿ.ಅಡ್ಡೂರು ಶ್ರೀನಿವಾಸಲು ಅವರು ಪೋಸ್ಟರ್ ಬಿಡುಗಡೆ ಮಾಡುವುದರ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು. 30-06-2026 ರಂದು ರಾಜ್ಯಾದ್ಯಾಂತ ಅಂತರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣೆ ವಿರೋಧಿ ದಿನವನ್ನು ಆಚರಿಸಲಾಗಿದ್ದು ಈ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಗಳು ಹಾಗೂ ಮಾನ್ಯ ಗೃಹ ಮಂತ್ರಿಗಳು ಕ್ಯಾಂಪನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ. ಅದರನ್ವಯ ಮಾದಕ ವಸ್ತುಗಳ ಸೇವನೆ, ಸಾಗಣೆ ಹಾಗೂ ಮಾರಾಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ ''ಬೇಡ ಬ್ರೋ '' '' ಮತ್ತು ''ರೈಸ್'' ಕಲಬುರಗಿ ನಗರ ಹಾಗೂ ಜಿಲ್ಲೆಯಾದ್ಯಂತ ಜಾರಿಗೊಳಿಸಲಾಗುತ್ತಿದೆ ಎಂದು ಎಸ್.ಪಿ.ಅಡ್ಡೂರು ಶ್ರೀನಿವಾಸಲು, ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.



ಉದಯವಾಹಿನಿ ಚಿತ್ರ

ಮಾದಕ ವಸ್ತುಗಳ ಸೇವನೆಯಿಂದ ಮಾನಸಿಕ ಆರೋಗ್ಯ, ಕುಟುಂಬ ಸಂಬಂಧಗಳು, ವಿಧ್ಯಾರ್ಥಿಗಳ ಶೈಕ್ಷಣಿಕ ಸಾಧನೆ. ವೃತ್ತಿ ಜೀವನ ಹಾಗೂ ಆತ್ಮಹತ್ಯೆಯಂತಹ ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ. ಡ್ರಗ್ಸ್ ಸೇವನೆಯಿಂದ ಹಲವಾರು ಜನ ಸಾವನಪ್ಪುತ್ತಿರುವ ಘಟನೆಗಳು ಬೆಳಕಿಗೆ ಬರುತ್ತಿವೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ರಾಜ್ಯಾದ್ಯಾಂತ ಜಾರಿಗೆ ತಂದಿರುವ ''ನೋ ಬ್ರೋ'' ಮತ್ತು ''ರೈಸ್'' ಅಭಿಯಾನದ ಮೂಲಕ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

# ಸತ್ಯ, ನಿಷ್ಠೆಯಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿ

• **ಉದಯವಾಹಿನಿ, ಧಾರವಾಡ, :**

ಪೊಲೀಸರು ತಮ್ಮ ಕರ್ತವ್ಯವನ್ನು ಶಿಸ್ತು ಬದ್ಧವಾಗಿ ಶ್ರದ್ಧೆಯಿಂದ ಮಾಡಬೇಕು. ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಪ್ರತಿಯೊಬ್ಬರು ಸಮವಸ್ತ್ರ ಹಾಗೂ ತಾವು ಮಾಡುವ ಕೆಲಸದ ಬಗ್ಗೆ ಹೆಮ್ಮೆ ಹೊಂದಿರಬೇಕು. ಪೊಲೀಸರು ಸತ್ಯ, ನಿಷ್ಠೆಯಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲು ಮುಂದಾಗಬೇಕು ಎಂದು ಬೆಂಗಳೂರಿನ ತರಬೇತಿ ಪೊಲೀಸ್ ಉಪ ಮಹಾನಿರೀಕ್ಷಕರಾದ ಡಿ. ದೇವರಾಜ ಅವರು ಹೇಳಿದರು.

ಅವರು ನಗರದ ಡಿ.ಎ.ಆರ್. ಪೊಲೀಸ್ ಕವಾಯತು ಮೈದಾನದಲ್ಲಿ ಜರುಗಿದ 24ನೇ ತಂಡದ ಸಶಸ್ತ್ರ ಪೊಲೀಸ್ ಕಾನ್‌ಸ್ಟೇಬಲ್‌ಗಳ ನಿರ್ಗಮನ ಪಥ ಸಂಚಲನದ ಕಾರ್ಯಕ್ರಮದಲ್ಲಿ ಪೊಲೀಸ್ ಪ್ರಶಿಕ್ಷಣಾರ್ಥಿ ತಂಡಗಳ ಪಥಸಂಚಲನ ವೀಕ್ಷಣೆ ಮಾಡಿ, ಮಾತನಾಡಿದರು. ಕ್ರಿಮಿನಲ್‌ಗಳ ಜೊತೆ ಪೊಲೀಸ್ ಒಡನಾಟವು ವೈಯಕ್ತಿಕವಾಗಿ ಇರಬಾರದು. ಕೈದಿಗಳನ್ನು ಜೈಲಿನಿಂದ ನ್ಯಾಯಾಲಯಕ್ಕೆ, ಒಂದು ಜೈಲಿನಿಂದ ಮತ್ತೊಂದು ಜೈಲಿಗೆ ಅಥವಾ ಆಸ್ಪತ್ರೆಗೆ ಸುರಕ್ಷಿತವಾಗಿ ಕರೆದೊಯ್ಯುವ ಮತ್ತು ಮರಳಿ ಕರೆತರುವ ಜವಾಬ್ದಾರಿಯನ್ನು ಮಾತ್ರ ನಿರ್ವಹಿಸಬೇಕು. ವೈಯಕ್ತಿಕ ಜೀವನದ ಬಗ್ಗೆ ಸಂಭಾಷಣೆ ಮಾಡಬಾರದು ಎಂದು ಅವರು ಹೇಳಿದರು.ನಾನು ಪೊಲೀಸ್ ಎಂಬ ಹೆಮ್ಮೆ ಇರಬೇಕೇ ಹೊರತು ದುರಹಂಕಾರ ಇರಬಾರದು. ಪೊಲೀಸ್ ಸಮವಸ್ತ್ರಕ್ಕೆ ಮತ್ತು ಪೊಲೀಸ್ ಇಲಾಖೆಗೆ ಚ್ಯುತಿ ಬಾರದ ಹಾಗೆ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ತಿಳಿಸಿದರು. ಪಥ ಸಂಚಲನದ ಪ್ರಧಾನ ದಂಡ ನಾಯಕರಾಗಿ ಧಾರವಾಡ ಡಿಎಆರ್‌ನ ಉಪ ಪೊಲೀಸ್ ಅಧೀಕ್ಷಕ ಮತ್ತು ಉಪ ಪ್ರಾಂಶುಪಾಲರಾದ ಡಿ.ಎಸ್.ಧನಗರ ಹಾಗೂ ಉಪ ದಂಡನಾಯಕರಾಗಿ ಡಿಎಆರ್‌ನ ಆರ್.ಪಿ.ಐ ಫಕ್ಕಿರಪ್ಪ ಆರ್. ಡೊಕ್ಕಣವರ ಅವರ ನೇತೃತ್ವದಲ್ಲಿ 4 ತಂಡಗಳು ಪಥಸಂಚಲವನ್ನು ಪ್ರದರ್ಶಿಸಿದರು.


ಉದಯವಾಹಿನಿ ಚಿತ್ರ

# ಜನಮನ ರಂಜಿಸಿದ ಗೀಗೀ ಪದಗಳು

• **ಉದಯವಾಹಿನಿ, ತಾಳಿಕೋಟೆ:**

ತಾಳಿಕೋಟೆಯ ಶ್ರೀ ಗ್ರಾಮದೇವಿ ಜಾತ್ರಾಮಹೋತ್ಸವ ಅಂಗವಾಗಿ 2-3 ದಿನಗಳ ಕಾಲ ರಾಜವಾಡೆಯಲ್ಲಿ ಏರ್ಪಡಿಸಲಾದ ಗೀಗೀ ಪದಗಳು ವಿವಿಧ ರೀತಿಯ ಕಥೆಗಳನ್ನು ಪದಗಳಿಂದ ಹಾಡುವ ಮೂಲಕ ಅರ್ಥೈಯಿಸುವದರೊಂದಿಗೆ ಹಾಡಿಕೆಯ ಗೀಗೀ ಪದಗಳು ಅರ್ಥಪೂರ್ಣವಾಗಿ ಜನಮನ ಸೆಳೆದವು.

ಈ ಗೀಗೀ ಪದಗಳ ಹಾಡಿಕೆಯ ತಂಡ ಬೆಳಗಾಂವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಕಣದಾಳದ ಮುಖ್ಯ ಗಾಯಕ ಲಕ್ಷ್ಮಣ ಕಣದಾಳ ಹಾಗೂ ಇನ್ನೊಂದು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಗೋಲಬಾವಿ ಗ್ರಾಮದ ಮುಖ್ಯ ಗಾಯಕಿ ಶ್ರೀಮತಿ ರೇಖಾ ಗೋಲಭಾವಿ ಅವರ ಈ ಎರಡೂ ತಂಡಗಳ ನಡುವೆ ನಡೆದ ಸೆಣಸಾಟದ ಗೀಗೀ ಪದಗಳಲ್ಲಿ ಗಂಡು ಹೆಚ್ಚೋ ಹೆಣ್ಣು ಹೆಚ್ಚೋ ಹಾಗೂ ಭಕ್ತಿ ಚರಿತ್ರೆಯ ಹಾಡುಗಳನ್ನು ಹಾಡುವದರೊಂದಿಗೆ ಕೇಳುಗರ ಹಾಗೂ ನೋಡುಗರ ಜನಮನ ಸೆಳೆದವಲ್ಲದೇ ಗ್ರಾಮೀಣ ಭಾಗದ ಜನಪದ ಕಲೆಗಳಲ್ಲಿ ಒಂದಾದ ಗೀ ಗೀ ಪದಗಳು ಇಂದಿಗೂ ತನ್ನದೇ ಆದ ಆಕರ್ಷಣೆಯನ್ನು ಉಳಿಸಿಕೊಂಡಿದ್ದು, ಜಾತ್ರೆಯ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಿದಂತಾಯಿತು.

# ಪತ್ರಿಕೋದ್ಯಮ ಸತ್ಯ, ನ್ಯಾಯದ ಪರವಾಗಿರಲಿ: ಯತ್ನಾಳ ಸಂಘಕ್ಕೆ 5 ಲಕ್ಷ

• **ಉದಯವಾಹಿನಿ, ವಿಜಯಪುರ, :**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ವಿಜಯಪುರ ಜಿಲ್ಲಾ ಘಟಕದ ವತಿಯಿಂದ ನಗರದ ಕಂದಗಲ್ಲ ಶ್ರೀಹನುಮಂತರಾಯ ರಂಗಮಂದಿರದಲ್ಲಿ ಪತ್ರಿಕಾ ದಿನಾಚರಣೆ-2026 ಅಂಗವಾಗಿ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ, ವಾರ್ಷಿಕ ಪ್ರಶಸ್ತಿ ಪ್ರದಾನ ಹಾಗೂ ಅಭಿನಂದನಾ ಸಮಾರಂಭ ವಿಜೃಂಭಣೆಯಿಂದ ನಡೆಯಿತು. ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಪತ್ರಿಕೋದ್ಯಮವು ಸಮಾಜದ ಸತ್ಯವನ್ನು ಅನಾವರಣಗೊಳಿಸುವ ಶಕ್ತಿಯಾಗಿದ್ದು, ಪತ್ರಕರ್ತರು ಸದಾ ಸತ್ಯ, ನ್ಯಾಯ ಮತ್ತು ಅಭಿವೃದ್ಧಿಯ ಪರವಾಗಿ ತಮ್ಮ ಪೆನ್ನು ಓಡಿಸಬೇಕು ಎಂದು ಹೇಳಿದರು. ಪತ್ರಕರ್ತರು ನಿರಂತರ ಒತ್ತಡದಲ್ಲಿ ಕೆಲಸ ಮಾಡುತ್ತಿರುವುದರಿಂದ ವರ್ಷಕ್ಕೊಮ್ಮೆ ಎಲ್ಲರೂ ಒಂದೆಡೆ ಸೇರಿ ಅನುಭವಗಳನ್ನು ಹಂಚಿಕೊಳ್ಳುವುದು ಅಗತ್ಯವಾಗಿದೆ. ಬಡವರು, ಶೋಷಿತರು ಹಾಗೂ ಅನ್ಯಾಯಕ್ಕೊಳಗಾದವರ ಪರವಾಗಿ ಮಾಧ್ಯಮಗಳು ಧ್ವನಿಯಾಗಬೇಕು. ಹಲವು ದೊಡ್ಡ ಹಗರಣಗಳು ಮತ್ತು ರಾಜಕಾರಣಿಗಳ ತಪ್ಪುಗಳು ಬೆಳಕಿಗೆ ಬಂದಿರುವುದು ಮಾಧ್ಯಮಗಳ ಕಾರಣದಿಂದಲೇ. ಜನರು ಮಾಧ್ಯಮಗಳಲ್ಲಿ ಪ್ರಕಟವಾಗುವ ಸುದ್ದಿಯನ್ನು ನಂಬುವುದರಿಂದ ವರದಿಗಳು ಪಾರದರ್ಶಕ ಹಾಗೂ ವಾಸ್ತವಾಧಾರಿತವಾಗಿರಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ವಿಜಯಪುರದ ಗೋಳಗುಮ್ಮಟದಂತೆ ಪತ್ರಿಕಾರಂಗವೂ ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಭಿವೃದ್ಧಿಗೆ 5 ಲಕ್ಷ ದೇಣಿಗೆ ನೀಡುವುದಾಗಿ ಘೋಷಿಸಿದರು.**

ಇತ್ತೀಚಿನ ದಿನಗಳಲ್ಲಿ ಅನಧಿಕೃತ ಪತ್ರಕರ್ತರು ಹಾಗೂ ಕೆಲವು ಯೂಟ್ಯೂಬ್ ವಾಹಿನಿಗಳು ಪತ್ರಿಕೋದ್ಯಮದ ನೈತಿಕತೆಯನ್ನು ಉಲ್ಲಂಘಿಸಿ ವರದಿಗಳನ್ನು ಪ್ರಸಾರ ಮಾಡುತ್ತಿರುವುದು ಆತಂಕಕಾರಿ. ಈ ಕುರಿತು ಕೇಂದ್ರ ವಾರ್ತಾ ಸಚಿವರಿಗೆ ಪತ್ರ ಬರೆದಿರುವುದಾಗಿ ಯತ್ನಾಳ ಹೇಳಿದರು.

ಪ್ರತಿಭಾ ಪುರಸ್ಕಾರ ವಿತರಿಸಿದ ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ, ಪ್ರಜಾಪ್ರಭುತ್ವದಲ್ಲಿ ಪತ್ರಿಕಾರಂಗವು ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗದ ಜೊತೆಗೆ ನಾಲ್ಕನೇ ಅಂಗವಾಗಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

# ದೇವಳದ ಹೆಸರಿನ ಒತ್ತುವರಿ ಜಾಗ ಸ್ವಾಧೀನ ಪ್ರಕ್ರಿಯೆ

• **ಉದಯವಾಹಿನಿ, ಪುತ್ತೂರು:**

ಪುತ್ತೂರು ಮಹಾಲಿಂಗೇಶ್ವರ ದೇವಳಕ್ಕೆ ಸೇರಿದ ಒತ್ತೂವರಿ ಜಾಗದ ಮರುಸ್ವಾಧೀನ ಕಾರ್ಯಕ್ಕೆ ಮತ್ತೆ ಚಾಲನೆ ನೀಡಲಾಗಿದೆ. ಕೊಂಬೆಟ್ಟಿನಲ್ಲಿ ದೇವಳದ ಹೆಸರಲ್ಲಿರುವ 16 ಸೆಂಟ್ಸ್ ಜಾಗವನ್ನು ಗುರುತಿಸಿ ಸ್ವಾಧೀನ ಪ್ರಕ್ರಿಯೆ ನಡೆಸಲಾಯಿತು. ಪುತ್ತೂರು ಮುಖ್ಯರಸ್ತೆಯಲ್ಲಿನ ದೇವಳದ ಹೆಸರಲ್ಲಿ ಪಹಣಿ ಹೊಂದಿರುವ ಕೋಟ್ಯಾಂತರ ಮೌಲ್ಯದ ಜಾಗದ ಪರಿಶೀಲನೆ ಶಾಸಕ ಅಶೋಕ್ ರೈ ಮತ್ತು ದೇವಳದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಪಂಜಿಗುಡ್ಡೆ ಈಶ್ವರ ಭಟ್ ಅವರ ನೇತೃತ್ವದಲ್ಲಿ ನಡೆಸಲಾಯಿತು.

ಕೊಂಬೆಟ್ಟಿನಲ್ಲಿ ಜಾಗಕ್ಕೆ ದೇವಳದ ವತಿಯಿಂದ ಫಲಕ ಹಾಕಲಾಯಿತು. ಮುಂದೆ ಈ ಭಾಗದಲ್ಲಿ ಸಂಪರ್ಕ ರಸ್ತೆ ಕಲ್ಪಿಸುವಂತೆ ಭರವಸೆ ನೀಡಿದರು. ಈ ಸಂದರ್ಭ ದೇವಳದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಈಶ್ವರ ಭಟ್ ಪಂಜಿಗುಡ್ಡೆ, ಸದಸ್ಯ ಈಶ್ವರ ಬೆಡೇಕರ್, ದೇವಳದ ಕಚೇರಿ ವ್ಯವಸ್ಥಾಪಕ ಹರೀಶ್ ಶೆಟ್ಟಿ, ಲೋಕೇಶ್ ಪಡ್ಡಾಯೂರು, ರೋಹನ್‌ರಾಜ್, ನಡುಬೈಲು ಗತ್ತು ಗೋಪಾಲ ಪೂಜಾರಿ ಮತ್ತು ದೇವಳದ ಸಿಬ್ಬಂದಿಗಳು ಸಹಿತ ಸ್ಥಳೀಯರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಯಾರ ವಶದಲ್ಲಿತ್ತು ಎಂಬ ಮಾಹಿತಿ ಇಲ್ಲ. ಆದರೆ ದೇವಸ್ಥಾನದಿಂದ ಜಾಗ ಸ್ವಾಧೀನ ಮಾಡಲಾಗಿದೆ. ಈಗಾಗಲೇ ಸುಮಾರು 11 ಎಕ್ರೆಯಷ್ಟು ಜಾಗವನ್ನು ದೇವಳಕ್ಕೆ ಸ್ವಾಧೀನ ಮಾಡಲಾಗಿದೆ. ಇನ್ನೂ ಸುಮಾರು ಆರೇಳು ಎಕ್ರೆ ಜಾಗ ಇದೆ. ಈ ಕುರಿತು ಪರಿಶೀಲನೆ ಮಾಡಲಾಗುತ್ತಿದೆ ಎಂದರು.**

ಮಾಧ್ಯಮದ ಜತೆ ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಅಶೋಕ್ ರೈ ಮಹಾಲಿಂಗೇಶ್ವರ ದೇವಸ್ಥಾನದ ಹೆಸರಿನಲ್ಲಿರುವ ಎಲ್ಲಾ ಪಹಣಿಗಳನ್ನು ಪರಿಶೀಲನೆ ವೇಳೆ ದೇವಳದ ಪಕ್ಕದಲ್ಲಿ 16 ಸೆಂಟ್ಸ್ ಜಾಗ ಇರುವುದು ಗಮನಕ್ಕೆ ಬಂದಿತ್ತು.

# ರೈತರಿಗೆ ಬರ ಪರಿಹಾರ ನೀಡಲಿ: ಜಿ.ಕರುಣಾಕರರೆಡ್ಡಿ

• **ಉದಯವಾಹಿನಿ, ಹರಪನಹಳ್ಳಿ:-**

ಮಳೆ ಕೊರತೆಯಿಂದ ತಾಲ್ಲೂಕಿನ ರೈತರು ಸಂಕಷ್ಟದಲ್ಲಿದ್ದು, ಕೂಡಲೇ ರಾಜ್ಯ ಸರ್ಕಾರ ಬರಗಾಲ ಎಂದು ಘೋಷಿಸಿ ರೈತರಿಗೆ ವೈಜ್ಞಾನಿಕ ಬೆಳೆ ಪರಿಹಾರ ನೀಡಹೇಕೆಂದು ಮಾಜಿ ಸಚಿವ ಜಿ.ಕರುಣಾಕರರೆಡ್ಡಿ ಆಗ್ರಹಿಸಿದರು.

ನಗರದ ಆಚಾರ್ಯ ಬಡಾವಣೆಯಲ್ಲಿರುವ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹರಪನಹಳ್ಳಿ ತಾಲ್ಲೂಕಿನಲ್ಲಿ ಪ್ರತಿವರ್ಷ 80 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಆಗುತ್ತದೆ ಆದರೆ ಈ ಬಾರಿ ಮಳೆ ಕೊರತೆಯಿಂದ 70 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ, ಆದರೆ ಮಳೆ ಅಭಾವದಿಂದಾಗಿ ಬಿತ್ತಿದ ಬೆಳೆಗಳು ಒಣಗುವ ಪರಿಸ್ಥಿತಿಗೆ ಬಂದಿವೆ ಇದರಿಂದ ರೈತ ಸಂಕಷ್ಟಕ್ಕೆ ಸಿಲುಕಿದ್ದಾನೆ, ತಕ್ಷಣ ಸರ್ಕಾರ ಬರಗಾಲ ಎಂದು ಘೋಷಿಸಿ ರೈತರಿಗೆ ವೈಜ್ಞಾನಿಕವಾಗಿ ಬೆಳೆ ಪರಿಹಾರ ನೀಡಹೇಕೆಂದು ಒತ್ತಾಯಿಸಿದರು.**ಸಾಲ ಮನ್ನಾ ಮಾಡಿ:** ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದು, ಕೂಡಲೇ ಸರ್ಕಾರ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕೆಂದು ಒತ್ತಾಯಿಸಿದರು.**ಗೋಶಾಲೆ ತೆರೆಯಿರಿ:** ಮಳೆ ಕೊರತೆಯಿಂದ ಜಾನುವಾರುಗಳಿಗೆ ಮೇವಿನ ಕೊರತೆ ಆಗದಂತೆ ಅವಶ್ಯಕತೆ ಇದ್ದ ಕಡೆ ಗೋಶಾಲೆಗಳನ್ನು ತೆರೆಯಬೇಕು ಎಂದು ಕರುಣಾಕರರೆಡ್ಡಿ ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

**ಹರಪನಹಳ್ಳಿ ತಾಲೂಕಿನಲ್ಲಿ ಪಿಡಿಒಗಳ ಕೊರತೆ ಹೆಚ್ಚಿದ್ದು,ಇದರಿಂದ ಗ್ರಾಮೀಣ ಪ್ರದೇಶದಲ್ಲಿ ಜನರ ಸಮಸ್ಯೆ ಕೇಳುವವರು ಇಲ್ಲದಂತಾಗಿದೆ, ಹಾಗಾಗಿ ಸರ್ಕಾರ ಕೂಡಲೇ ಪಿಡಿಒಗಳ ನೇಮಕಾತಿ ಮಾಡಬೇಕು, ಪಿಡಿಒ ಇಲ್ಲದ ಕಡೆ ಕಾರ್ಯದರ್ಶಿಗಳಿಗೆ ಜವಾಬ್ದಾರಿ ನೀಡಬೇಕೆಂದು ಒತ್ತಾಯಿಸಿದರು.**

# ಕೆಕೆಆರ್‌ಟಿಸಿಗೆ 56 ಪ್ರೀಮಿಯಂ ಬಸ್: ಲೋಕಾರ್ಪಣೆಗೆ ಸಿದ್ಧತೆ

## ಬಿಎಂಟಿಸಿ ಹಾಗೂ ಕೆಎಸ್‌ಆರ್‌ಟಿಸಿಯಲ್ಲಿ ಈಗಾಗಲೇ ಸಾವಿರಾರು ಎಲೆಕ್ನಿಕ್ ಬಸ್‌ಗಳು ಸೇರ್ಪಡೆಯಾಗಿ ಪ್ರಯಾಣಿಕರಿಗೆ ಸೇವೆ ಸಲ್ಲಿಸುತ್ತಿವೆ.

• **ಉದಯವಾಹಿನಿ, ಕಲಬುರಗಿ:**

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ತನ್ನ ಪ್ರಯಾಣಿಕರಿಗೆ ವಿನೂತನ ಮಾದರಿಯ ಸಂಚಾರ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ 56 ಪ್ರೀಮಿಯಂ ಬಸ್‌ಗಳನ್ನು ಖರೀದಿಸಿದ್ದು, ಸೆ.17ರಂದು ಲೋಕಾರ್ಪಣೆಯಾಗುವ ಸಾಧ್ಯತೆ ಇದೆ.

ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳು ಹಾಗೂ ನೆರೆಯ ವಿಜಯಪುರ ಜಿಲ್ಲೆಯ ವ್ಯಾಪ್ತಿ ಹೊಂದಿರುವ ಕೆಕೆಆರ್‌ಟಿಸಿಯು ಈಗಾಗಲೇ ತನ್ನ ಬಸ್‌ಗಳಲ್ಲೇ ಅತಿ ದುಬಾರಿಯಾದ ವೋಲ್ವೆ ಕಂಪನಿಯ 'ಕಲ್ಯಾಣ ರಥ' ಸ್ಲೀಪರ್ ಬಸ್ ಸೌಲಭ್ಯವನ್ನು ಕಲಬುರಗಿ-ಬೆಂಗಳೂರು,ವಿಜಯಪುರ-ಬೆಂಗಳೂರು, ಸಿಂಧನೂರು-ಬೆಂಗಳೂರು ಮಧ್ಯೆ ಒದಗಿಸುತ್ತಿದೆ.

**1 :56 ಪ್ರೀಮಿಯಂ ಬಸ್‌ಗಳು**
**2 :20 ಎಸಿ ,20 ನಾನ್ ಎಸಿ ಬಸ್‌ಗಳು**
**3 :16 ಎಸಿ ಸ್ಲಿಪರ್ ಬಸ್‌ಗಳು**

ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿರುವುದರಿಂದ ನಿಗಮವು 56 ಬಸ್‌ಗಳನ್ನು ಖರೀದಿಸಿದ್ದು, ಪ್ರಯಾಣಿಕರನ್ನು ಹೊತ್ತೊಯ್ಯಲು ಅಣಿಯಾಗುತ್ತಿವೆ.

ಅದರಲ್ಲಿ 20 ಎಸಿ, 20 ನಾನ್ ಎಸಿ ಹಾಗೂ 16 ಎಸಿ ಸ್ಲಿಪರ್ ಬಸ್‌ಗಳು ಸೇರಿವೆ. ಸದ್ಯ ಕಾರ್ಯಾಚರಣೆಯಲ್ಲಿರುವ ಕಲ್ಯಾಣ ರಥ ಬಸ್ 15 ಮೀಟರ್ ಉದ್ದವಿದೆ. ಹೊಸದಾಗಿ ಬರುವ ಎಸಿ ಬಸ್‌ಗಳು 13.5 ಮೀಟರ್ ಉದ್ದ ಇರಲಿವೆ. ಹೀಗಾಗಿ, ಇವುಗಳಿಗೆ ಕಲ್ಯಾಣ ರಥ ಮಿನಿ ಎಂದು ನಾಮಕರಣ ಮಾಡಲಾಗಿದೆ. ಈ ಬಸ್‌ಗಳಿಗೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುವ ನಿರೀಕ್ಷೆ ಇದೆ ಎನ್ನುತ್ತಾರೆ ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಡಾ.ಸುಶೀಲಾ.

ಪ್ರಸ್ತುತ ಕಲಬುರಗಿಯಿಂದ ಬೆಂಗಳೂರು, ಶಿವಮೊಗ್ಗ, ಹರಪನಹಳ್ಳಿ, ಹೊಸಪೇಟೆ, ಬಳ್ಳಾರಿ, ಕೊಪ್ಪಳ, ಧಾರವಾಡ, ವಿಜಯಪುರ-ಹೈದರಾಬಾದ್ ಸೇರಿದಂತೆ ವಿವಿಧ ರೂಟ್‌ಗಳಲ್ಲಿ ಸಂಚರಿಸುತ್ತಿರುವ ಬಹುತೇಕ ಬಸ್‌ಗಳು 2013ರಲ್ಲಿ ಖರೀದಿಸಿದ್ದವು.

13 ವರ್ಷಗಳಿಂದ ಸಂಚರಿಸುತ್ತಿರುವ ಈ ಬಸ್‌ಗಳ ಸೀಟು, ಪರದೆಗಳು ಸುಸ್ಥಿತಿಯಲ್ಲಿಲ್ಲ. ಜೊತೆಗೆ, ಕೆಟ್ಟ ರಸ್ತೆಯಲ್ಲಿ ಸತತವಾಗಿ ಸಂಚರಿಸಿದ್ದರಿಂದ ಕೆಳಭಾಗಕ್ಕೆ ಹಾನಿಯಾಗಿ ರಂಧ್ರಗಳು ಬಿದ್ದಿವೆ. ಅವುಗಳನ್ನು ದುರಸ್ತಿ ಮಾಡುವುದು ಆಗುವುದಿಲ್ಲ. ಹೊಸ ಬಸ್‌ಗಳು ಸೇರ್ಪಡೆಯಾದರೆ ಇವುಗಳನ್ನು ಸೇವೆಯಿಂದ ಹಿಂದಕ್ಕೆ ಪಡೆಯಬಹುದು ಎನ್ನುತ್ತಾರೆ ನಿಗಮದ ಹಿರಿಯ ಅಧಿಕಾರಿಯೊಬ್ಬರು. ಜನರು ಉತ್ತಮ ಸೇವೆ ನೀಡಿದರೆ ಟಿಕೆಟ್ ದರದ ಬಗ್ಗೆ ಗಮನ ಕೊಡುವುದಿಲ್ಲ ಎಂಬುದನ್ನು ಕಂಡುಕೊಂಡಿರುವ ಮಂಡಳಿಯು ಹೊಸ ಬಸ್‌ಗಳ ಒಳಾಂಗಣವನ್ನು ವಿಶಿಷ್ಟವಾಗಿ ವಿನ್ಯಾಸಗೊಳಿಸುವಂತೆ ತಯಾರಿಕರಿಗೆ ಸೂಚಿಸಿದೆ.

ಅತ್ಯುತ್ತಮ ಬೆಳಕಿನ ವ್ಯವಸ್ಥೆ, ಚಾರ್ಜಿಂಗ್ ಪಾಯಿಂಟ್, ಸುಖಾಸೀನ ಸೀಟುಗಳು, ಗುಣಮಟ್ಟದ ಪರದೆಗಳನ್ನು ಅಳವಡಿಸಲಾಗುತ್ತಿದೆ. ಇದರಿಂದಾಗಿ ಪ್ರಯಾಣಿಕರು ಖಾಸಗಿ ಬದಲು ಸರ್ಕಾರಿ ಸ್ವಾಮ್ಯದ ನಿಗಮದ ಬಸ್ಸುಗಳನ್ನೇ ಆಯ್ಕೆ ಮಾಡಿಕೊಳ್ಳುತ್ತಾರೆ. ಇದಕ್ಕೆ ನಿತ್ಯ ಕಲಬುರಗಿ-ಬೆಂಗಳೂರಿಗೆ ಸಂಚರಿಸುವ ಕಲ್ಯಾಣ ರಥ ಬಸ್‌ಗೆ ಭರ್ತಿಯಾಗುತ್ತಿರುವುದೇ ಸಾಕ್ಷಿಯಾಗಿದೆ ಎನ್ನುತ್ತಾರೆ ಆ ಅಧಿಕಾರಿ. ಹೊಸದಾಗಿ ಸೇರ್ಪಡೆಯಾಗುವ ಬಸ್‌ಗಳಿಗೆ ಕಲ್ಯಾಣ ರಥ (ಎಸಿ ಸ್ಲಿಪರ್) ಹಾಗೂ ಅಮೋಘವರ್ಷ (ನಾನ್ ಎಸಿ ಸ್ಲೀಪರ್) ಹೆಸರುಗಳನ್ನೇ ಉಳಿಸಿಕೊಳ್ಳಲಾಗುತ್ತಿದೆ.



ಉದಯವಾಹಿನಿ ಚಿತ್ರ

**ಬಿಸಿಲಿನ ಝಳದಿಂದ ತತ್ತರಿಸಿರುವ ಈ ನಗರಗಳ ಜನರಿಗಾಗಿ ಅಷ್ಟೂ ಬಸ್‌ಗಳು ಎಸಿ ಸೌಲಭ್ಯವನ್ನು ಹೊಂದಿರಲಿವೆ. ಅಷ್ಟೂ ಬಸ್‌ಗಳಲ್ಲಿ ಎಸಿ ಸೌಲಭ್ಯ ಇರಲೇಬೇಕು ಎಂದು ಪ್ರಧಾನಿ ಕಚೇರಿ ಸೂಚನೆ ನೀಡಿದ್ದರಿಂದ ಪಿಎಂ ಇ-ಸೇವಾ ಯೋಜನೆಯಡಿ ಪೂರೈಕೆಯಾಗುವ ಬಸ್‌ಗಳಲ್ಲಿ ಎಸಿ ಕಡ್ಡಾಯವಾಗಿ ಇರಲಿದೆ - ಕೆಕೆಆರ್‌ಟಿಸಿ ವ್ಯವಸ್ಥಾಪಕಿ ಡಾ.ಸುಶೀಲಾ ತಿಳಿಸಿದರು.**

### 'ಪಿಎಂ ಇ ಬಸ್ ಸೇವಾ' ಯೋಜನೆ

**ಕೇಂದ್ರ ಸರ್ಕಾರವು 'ಪಿಎಂ ಇ ಬಸ್ ಸೇವಾ' ಯೋಜನೆಯಡಿ ದೇಶದ 169 ನಗರಗಳಿಗೆ 57.613 ಕೋಟಿ ವೆಚ್ಚದಲ್ಲಿ 10 ಸಾವಿರ ಎಲೆಕ್ನಿಕ್ ಬಸ್‌ಗಳನ್ನು ಒದಗಿಸುತ್ತಿದೆ. ಅದರ ಭಾಗವಾಗಿ ಕಲಬುರಗಿ ನಗರಕ್ಕೆ 100 ಬಸ್, ಬಳ್ಳಾರಿಗೆ 50 ಹಾಗೂ ವಿಜಯಪುರ ನಗರಕ್ಕೆ 50 ಸೇರಿದಂತೆ 200 ಬಸ್‌ಗಳು ಕೆಲವೇ ದಿನಗಳಲ್ಲಿ ಸೇರ್ಪಡೆಯಾಗಲಿವೆ.**

**ಸೆಪ್ಟೆಂಬರ್ ವೇಳೆಗೆ 200 ಎಲೆಕ್ನಿಕ್ ಬಸ್ ಹಾಗೂ 56 ಪ್ರೀಮಿಯಂ ಬಸ್‌ಗಳು ನಿಗಮಕ್ಕೆ ಸೇರ್ಪಡೆಯಾಗಲಿವೆ. ರಾಜ್ಯ ಸರ್ಕಾರವು ವಿಶ್ವ ಬ್ಯಾಂಕ್ ನೆರವಿನಿಂದ ಹೊಸದಾಗಿ 1000 ಎಲೆಕ್ನಿಕ್ ಬಸ್‌ಗಳನ್ನು ನಿಗಮಕ್ಕೆ ಒದಗಿಸಲಿದೆ.**
**-ಡಾ. ಸುಶೀಲಾ ಬಿ. ಕೆಕೆಆರ್‌ಟಿಸಿ ಎಂ.ಡಿ.**

# ಮಿನಿ ನ್ಯೂಸ್

## ಪುರಸಭೆಗೆ ಬೀಗ ಜಡಿದು ಪ್ರತಿಭಟನೆ

• **ಉದಯವಾಹಿನಿ, ಅಫಜಲಪುರ:**

ಪಟ್ಟಣದ ವಾರ್ಡ್ ನಂಬರ್ 17ರಲ್ಲಿ ಸಾಕಷ್ಟು ಸಮಸ್ಯೆಗಳಿದ್ದು, ಹಲವಾರು ಬಾರಿ ದೂರು ನೀಡಿದರೂ ಪರಿಹರಿಸುತ್ತಿಲ್ಲ ಎಂದು ಅಸಮಾಧಾನಗೊಂಡ ನಾಗರಿಕರು ಪುರಸಭೆಗೆ ಬೀಗ ಜಡಿದು ಪ್ರತಿಭಟನೆ ನಡೆಸುತ್ತಿದ್ದಾರೆ. ಒಂದು ವರ್ಷದಿಂದ ವಾರ್ಡನಲ್ಲಿರುವ ಚರಂಡಿಗಳು ತುಂಬಿಕೊಂಡು, ಕೊಳಚೆ ನೀರು ರಸ್ತೆ ಮೇಲೆ ನೀರು ಹರಿಯುತ್ತಿದೆ. ಸರಿಯಾಗಿ ಕಸ ವಿಲೇವಾರಿಯೂ ಮಾಡುತ್ತಿಲ್ಲ. ಕುಡಿಯುವ ನೀರನ್ನೂ ಸರಿಯಾಗಿ ಪೂರೈಸುತ್ತಿಲ್ಲ ಎಂದು ಪಟ್ಟಣದ ವಾರ್ಡ್ 17ರ ನಿವಾಸಿಗಳು ದೂರಿದರು. ವಾರ್ಡನಲ್ಲಿ ಚರಂಡಿಗಳು ತುಂಬಿಕೊಂಡಿವೆ. ಮಳೆ ಬಂದಾಗ ಚರಂಡಿಯಲ್ಲಿ ನೀರು ರಸ್ತೆ ಮೇಲೆ ಹರಿಯುತ್ತದೆ. ಅದು ಕುಡಿಯುವ ನೀರು ಪೂರೈಕೆ ಆಗುವ ನಲ್ಲಿಗಳ ತಗ್ಗುಗಳಿಗೆ ಹೋಗಿ ಸೇರುತ್ತದೆ. ಅದೇ ನೀರು ಜನರು ಕುಡಿಯುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ವಾರ್ಡನ ನಾಗರಿಕರಾದ ಸಿದ್ದು ರಾಣಿ, ಸಿದ್ದು ಮ್ಯಾಕೇರಿ, ಸಿದ್ದು ಬಿರಾದಾರ, ಶ್ರೀಕಾಂತ ಶಿವಣಗಿ, ಶಾಂತು ಅಂಜುಟಗಿ, ಬಸು ಭೈರಾಮಡಗಿ, ನಾಗರಾಜ್ ಪಾಟೀಲ, ಅಂಬರೀಶ್ ಹಡಪದ,ಸಂತೋಷ್ ಅತನೂರ ಇತರರು ಇದ್ದರು.

## ಶಾಲಾ ವಾಹನಗಳ ಅಪಘಾತ, ವಿದ್ಯಾರ್ಥಿಗಳ ಸುರಕ್ಷತೆ ಬಗ್ಗೆ ಆತಂಕ

• **ಉದಯವಾಹಿನಿ, ಉಡುಪಿ:**

ನಗರ ವ್ಯಾಪ್ತಿಯಲ್ಲಿ ಪದೇ ಪದೇ ಶಾಲಾ ಬಸ್‌ಗಳು ಅಪಘಾತಕ್ಕೀಡಾಗುತ್ತಿರುವುದು ಪೋಷಕರಲ್ಲಿ ಆತಂಕ ಉಂಟು ಮಾಡುವುದರ ಜತೆಗೆ, ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಗಂಭೀರ ಪ್ರಶ್ನೆಯನ್ನೂ ಹುಟ್ಟುಹಾಕಿದೆ.

ಬಹುತೇಕ ಖಾಸಗಿ ಶಾಲೆಗಳಿಗೆ ಶಾಲಾ ಬಸ್ ವ್ಯವಸ್ಥೆಯಿರುವುದರಿಂದ ಹೆಚ್ಚಿನ ವಿದ್ಯಾರ್ಥಿಗಳು ಅದರಲ್ಲೇ ಸಂಚರಿಸುತ್ತಾರೆ. ಉಳಿದಂತೆ ಆಟೊ ರಿಕ್ಷಾ, ವ್ಯಾನ್, ಮಿನಿ ಬಸ್‌ಗಳಲ್ಲೂ ಮಕ್ಕಳು ಶಾಲೆಗೆ ಹೋಗುತ್ತಾರೆ. ಆದರೆ ಇಂತಹ ವಾಹನಗಳಲ್ಲಿ ನಿಯಮ ಮೀರಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಕರೆದೊಯ್ಯಲಾಗುತ್ತಿದೆ. ಕೆಲ ಚಾಲಕರು ಮದ್ಯಪಾನ ಮಾಡಿರುತ್ತಾರೆ. ಅತಿ ವೇಗದಿಂದ ಚಾಲಾಯಿಸುತ್ತಾರೆ ಎಂಬ ಆರೋಪಗಳು ಹಿಂದಿನಿಂದಲೂ ಕೇಳಿ ಬರುತ್ತಿವೆ. ಶಾಲಾ ವಾಹನಗಳು ಅಪಘಾತಕ್ಕೆ ಒಳಗಾದಾಗ ಅಂತಹ ಚರ್ಚೆಗಳು ಮತ್ತೆ ಮುನ್ನೆಲೆಗೆ ಬರುತ್ತವೆ.

ಜೂನ್ 16ರಂದು ವಿದ್ಯಾರ್ಥಿಗಳು ತುಂಬಿದ್ದ ಶಾಲಾ ಬಸ್ಸೊಂದು ಚಾಲನೆಯಲ್ಲಿರುವಾಗಲೇ ಮಣಿಪಾಲದ ಬಳಿ ಚಾಲಕನಿಗೆ ಎದೆನೋವು ಕಾಣಿಸಿಕೊಂಡು ರಸ್ತೆ ವಿಭಜಕಕ್ಕೆ ಡಿಕ್ಕಿಹೊಡೆದು ನಿಂತಿತ್ತು. ಜೂನ್ 26ರಂದು ಶಾಲಾ ಬಸ್ಸೊಂದು ಮಣಿಪಾಲದ ಬಳಿ ಡಿವೈಡರ್‌ಗೆ ಹತ್ತಿತ್ತು. ಇವೆರಡು ಪ್ರಕರಣಗಳಲ್ಲೂ ವಿದ್ಯಾರ್ಥಿಗಳು ಅಪಾಯದಿಂದ ಪಾರಾಗಿದ್ದರು.

## ಪುರಾತನ ಬಾವಿಗೆ ಬಿದ್ದು ಬಾಲಕ ಸಾವು


ಉದಯವಾಹಿನಿ ಚಿತ್ರ

• **ಉದಯವಾಹಿನಿ, ದಾವಣಗೆರೆ:**

ಪ್ರವಾಸಕ್ಕೆ ತೆರಳಿದ್ದ ವೇಳೆ ಕಾಲು ಜಾರಿ ಪುರಾತನ ಬಾವಿಗೆ ಬಿದ್ದು ಬಾಲಕ ಸಾವನ್ನಪ್ಪಿರುವ ಘಟನೆ ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನ ಬಾಗಳಿಯ ಶ್ರೀ ಕಲ್ಲೇಶ್ವರ ದೇಗುಲದ ಬಳಿ ನಡೆದಿದೆ. ವಿಷ್ಣು (10) ಮೃತಪಟ್ಟ ಬಾಲಕ. ವಿಷ್ಣು ಹರಪನಹಳ್ಳಿಯ ಗಾಜಿನಕೇರಿಯ ನಿವಾಸಿಗಳಾದ ವಿನೋದ್ ವಿದ್ಯಾ ದಂಪತಿ ಪುತ್ರ. ಕುಟುಂಬ ಸದ್ಯಸರು ಮಕ್ಕಳ ಜೊತೆ ಪ್ರವಾಸಕ್ಕೆ ತೆರಳಿದ್ದ ವೇಳೆ ದುರಂತ ಸಂಭವಿಸಿದೆ. ಮಗನನ್ನು ಕಳೆದುಕೊಂಡ ತಂದೆ, ತಾಯಿಯರ ಆಕ್ರಂದನ ಮುಗಿಲು ಮುಟ್ಟಿದೆ.

## ಪ್ರಯಾಣದ ವೇಳೆ ಶಿಕ್ಷಕನಿಗೆ ಹೃದಯಾಘಾತ

• **ಉದಯವಾಹಿನಿ, ಹುಬ್ಬಳ್ಳಿ:**

ಕಲಬುರಗಿಯಿಂದ ಹುಬ್ಬಳ್ಳಿಗೆ ಬರುತ್ತಿದ್ದ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ನಲ್ಲಿ ಶಿಕ್ಷಕರೊಬ್ಬರಿಗೆ ಹೃದಯಾಘಾತ ಸಂಭವಿಸಿದ ಘಟನೆ ನಡೆದಿದೆ. ವ್ಯಕ್ತಿ ಅಸ್ವಸ್ಥತೆ ರೀತಿಯಲ್ಲಿರುವುದನ್ನು ಕಂಡು ಬಸ್ ಚಾಲಕ ಕೂಡಲೇ ಬಸ್‌ಅನ್ನು ನೇರವಾಗಿ ನಗರದ ಕೆಎಂಸಿಆರ್‌ಐ ಆಸ್ಪತ್ರೆಗೆ ತೆಗೆದುಕೊಂಡು ಹೋಗಿದ್ದಾರೆ. ಆದರೆ, ದುರಾದೃಷ್ಟವಶಾತ್ ಪ್ರಯಾಣಿಕ ಶಿಕ್ಷಕ ಮೃತಪಟ್ಟಿದ್ದಾರೆ.

ಮೃತ ವ್ಯಕ್ತಿಯನ್ನು ಧಾರವಾಡದ ಸತೀಶ್ ಮೊರಬ ಎಂದು ಗುರುತಿಸಲಾಗಿದೆ. ಸುದ್ದಿ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ಪರಿಶೀಲನೆ ನಡೆಸಿದರು.ಶಿಕ್ಷಕ ಸತೀಶ್ ಅವರು ಕಾರ್ಯ ನಿಮಿತ್ತ ಕಲಬುರಗಿಯಿಂದ ಹುಬ್ಬಳ್ಳಿಗೆ ಬರುತ್ತಿದ್ದರು. ಆದರೆ, ಹುಬ್ಬಳ್ಳಿ ಪಕ್ಕದ ಶಿರಗುಪ್ಪಿ ಬಳಿ ಅಸ್ವಸ್ಥತೆ ರೀತಿ ಸೀಟಿನಲ್ಲಿ ಕುಳಿತಿರುವುದನ್ನು ಗಮನಿದ ನಿರ್ವಾಹಕ ಎಂ.ಹೆಚ್. ರಿತ್ತಿ ಎಂಬುವರು ತಕ್ಷಣ ಆಂಬ್ಯುಲೆನ್ಸ್‌ಗೆ ಕರೆ ಮಾಡಿದ್ದಾರೆ.

ಆದರೆ, ಆಂಬ್ಯುಲೆನ್ಸ್ ಸಿಬ್ಬಂದಿ ತಕ್ಷಣ ಕೆಎಂಸಿಆರ್‌ಐಗೆ ಕರೆದುಕೊಂಡು ಹೋಗುವಂತೆ ಸೂಚಿಸಿದ್ದಾರೆ. ಆಗ ಬಸ್ ಚಾಲಕ ಎ. ಎ. ನವಲಗುಂದ ನೇರವಾಗಿ ಬಸ್ ಅನ್ನೇ ಕೆಎಂಸಿಆರ್‌ಐಗೆ ತೆಗೆದುಕೊಂಡು ಹೋಗಿದ್ದಾರೆ. ಆದರೆ, ದುರದೃಷ್ಟವಶಾತ್ ಶಿಕ್ಷಕ ಮೃತಪಟ್ಟಿದ್ದಾನೆ ಎಂದು ವೈದ್ಯರು ಖಚಿತಪಡಿಸಿದ್ದಾರೆ. ಹೃದಯಾಘಾತ ಸಂಭವಿಸಿದ ಪ್ರಯಾಣಿಕರೊಬ್ಬರ ಜೀವ ಉಳಿಸುವಲ್ಲಿ ಬಸ್ ಚಾಲಕ ಹಾಗೂ ನಿರ್ವಾಹಕರ ಸಮಯಪ್ರಜ್ಞೆ ವಿಫಲವಾಗಿದೆ.

## 15 ದಿನಗಳಲ್ಲಿ 6,498 ಪ್ರಕರಣ ದಾಖಲು!

• **ಉದಯವಾಹಿನಿ, ಕಾರವಾರ:**

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತು ಸಾರ್ವಜನಿಕರಲ್ಲಿ ಸುರಕ್ಷತೆಯ ಭಾವನೆಯನ್ನು ಮೂಡಿಸಲು ಉತ್ತರ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆ ಭರ್ಜರಿ ಕಾರ್ಯಾಚರಣೆಗೆ ಇಳಿದಿದೆ. ಕಳೆದ 15 ದಿನಗಳಿಂದ ಜಿಲ್ಲೆಯಾದ್ಯಂತ ವ್ಯಾಪಕವಾಗಿ 'ಏರಿಯಾ ಡಾಮಿನೇಷನ್' ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿದ್ದು, ಬರೋಬ್ಬರಿ 6,498 ಪ್ರಕರಣಗಳನ್ನು ದಾಖಲಿಸುವ ಮೂಲಕ ಸಮಾಜಘಾತುಕ ಶಕ್ತಿಗಳಿಗೆ ಖಡಕ್ ಎಚ್ಚರಿಕೆ ನೀಡಿದೆ.

ಸಾರ್ವಜನಿಕರಿಗೆ ಸುರಕ್ಷತೆ ಎಂಬ ದೃಢ ಸಂಕಲ್ಪದೊಂದಿಗೆ ಜಿಲ್ಲಾ ಪೊಲೀಸರು ಹಗಲಿರುಳು ಮುಂಜಾಗ್ರತಾ ಕ್ರಮವಾಗಿ ಈ ವಿಶೇಷ ಕಾರ್ಯಾಚರಣೆ ನಡೆಸುತ್ತಿದ್ದಾರೆ. ವಿಶೇಷವಾಗಿ ಸಂಜೆ ಹಾಗೂ ರಾತ್ರಿ, ವೇಳೆ ಜಿಲ್ಲೆಯ ಪ್ರಮುಖ ರಸ್ತೆಗಳು, ಸರ್ಕಲ್‌ಗಳು ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಸಕ್ರಿಯರಾಗಿದ್ದಾರೆ. ಅನುಮಾನಾಸ್ಪದವಾಗಿ ಸಂಚರಿಸುವ ಕಿಡಿಗೇಡಿಗಳು, ಶಂಕಿತ ವ್ಯಕ್ತಿಗಳು ಮತ್ತು ವಾಹನಗಳ ಮೇಲೆ ತೀವ್ರ ನಿಗಾ ಇರಿಸಲಾಗಿದ್ದು, ಕಟ್ಟುನಿಟ್ಟಿನ ತಪಾಸಣೆ ನಡೆಸಲಾಗುತ್ತಿದೆ. ಅಪರಾಧಗಳು ನಡೆಯುವ ಮುನ್ನವೇ ಅವುಗಳನ್ನು ತಡೆಗಟ್ಟುವ ಉದ್ದೇಶದಿಂದ ಈ ದೃಶ್ಯ ಪೊಲೀಸ್ ಹಾಜರಾತಿ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗಿದೆ.

